ಸಂಪುಟ 01 | ಸಂಚಿಕೆ 165 | ಶನಿವಾರ 09 ಮೇ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ರಾಷ್ಟ್ರೀಯ ಬಿಲ್ಲುಗಾರಿಕೆ ದಿನ**

ರಾಷ್ಟ್ರೀಯ ಬಿಲ್ಲುಗಾರಿಕೆ ದಿನವನ್ನು ವಾರ್ಷಿಕವಾಗಿ ಮೇ ತಿಂಗಳ ಎರಡನೇ ಶನಿವಾರದಂದು ಆಚರಿಸಲಾಗುತ್ತದೆ, ಇದು ಮೇ 9, 2026 ರಂದು ಬರುತ್ತದೆ. ಈ ದಿನವು ವಿಶ್ವದ ಅತ್ಯಂತ ಹಳೆಯ ಕ್ರೀಡೆಗಳಲ್ಲಿ ಒಂದನ್ನು ಗೌರವಿಸುತ್ತದೆ ಮತ್ತು ಇಂದಿಗೂ ಅದರ ಮೂಲ ರೂಪದಲ್ಲಿ ಆಚರಿಸಲ್ಪಡುವ ಏಕೈಕ ಕ್ರೀಡೆಯಾಗಿದೆ, ಜನರು ಕಲಿಯಲು, ಭಾಗವಹಿಸಲು ಮತ್ತು ಸ್ಥಳೀಯ ಶೂಟಿಂಗ್ ಶ್ರೇಣಿಗಳಿಗೆ ಭೇಟಿ ನೀಡಲು ಪ್ರೋತ್ಸಾಹಿಸುತ್ತದೆ.

**2) ನೇಷನ್ ಮಿನಿ ಗಾಲ್ಫ್ ಡೇ**

ಗಾಲ್ಫ್ ಕ್ರೀಡೆಯಂತೆಯೇ, ಆದರೆ ಹೆಸರೇ ಸೂಚಿಸುವಂತೆ ಇದು ಆಟದ ಚಿಕಣಿ ಆವೃತ್ತಿಯಾಗಿದೆ. 9 ಅಥವಾ 18 ರಂಧ್ರಗಳ ಸರಣಿಯೊಂದಿಗೆ ಇನ್ನೂ ಆಡಲಾಗಿದ್ದರೂ, ಚಿಕಣಿ ಗಾಲ್ಫ್ ಕೋರ್ಸ್‌ಗಳು ಚಿಕ್ಕದಾಗಿರುತ್ತವೆ, ಸಾಮಾನ್ಯವಾಗಿ ಥೀಮ್ ಅನ್ನು ಹೊಂದಿರುತ್ತವೆ ಮತ್ತು ಆಟದ ಕಷ್ಟವನ್ನು ಹೆಚ್ಚಿಸುವ ವಿವಿಧ ಅಡೆತಡೆಗಳನ್ನು ಹೊಂದಿರುತ್ತವೆ.

## ಸುಭಾಷಿತ

ನಿರಂತರವಾಗಿ ಕಲಿಕೆಯಲ್ಲಿ ನಿರತರಾಗಿ.
ಇಲ್ಲದಿದ್ದರೆ ಉಪಯುಕ್ತ ಕಾರ್ಯಗಳಿಂದ
ವಿಮುಖರಾಗುತ್ತೀರಿ.

–ಸತ್ಯ ನಾದೆಲ್ಲ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ತಮಿಳುನಾಡಿನಲ್ಲಿ ರಾಜಕೀಯ ಹೈಡ್ರಾಮ, ಕ್ಷಣಕ್ಕೊಂದು ಟ್ವಿಸ್ಟ್

**ಚೆನ್ನೈ:** ತಮಿಳುನಾಡು ರಾಜಕಾರಣದಲ್ಲಿ ಕ್ಷಣ–ಕ್ಷಣಕ್ಕೂ ಭಿನ್ನ ತಿರುವುಗಳು ಕಾಣಿಸಿಕೊಳ್ಳುತ್ತಿದ್ದು, ಸರ್ಕಾರ ರಚನೆಯ ಪ್ರಕ್ರಿಯೆಗಳ ಬಗ್ಗೆ ಇಂದು ಸಂಜೆಯ ವೇಳೆಗೆ ಸ್ಪಷ್ಟ ಚಿತ್ರಣ ಹೊರಬೀಳಲಿದೆ. ರಾಜ್ಯಪಾಲರ ನಡೆಯನ್ನು ಖಂಡಿಸಿ, ಒಂದೆಡೆ ಕಾಂಗ್ರೆಸ್ ಪ್ರತಿಭಟನೆ ನಡೆಸಿದರೆ, ಮತ್ತೊಂದೆಡೆ ಅತೀ ದೊಡ್ಡ ಪಕ್ಷವಾಗಿ ಹೊರಹೊಮಿರುವ ಟಿವಿಕೆ ಸಾಮೂಹಿಕ ರಾಜೀನಾಮೆಯ ಬೆದರಿಕೆಯೊಡ್ಡಿದೆ.

ಈ ನಡುವೆ ಎಐಎಡಿಎಂಕೆ ಜೊತೆ ಮೈತ್ರಿಯನ್ನು ಡಿಎಂಕೆಯ ಸರ್ವೋಚ್ಚ ನಾಯಕ ಎಂ.ಕೆ.ಸ್ಟಾಲಿನ್ ತಳ್ಳಿ ಹಾಕಿದ್ದರೂ ಕೂಡ ಒಳಗೊಳಗೆ ವದಂತಿಗಳು ಕೇಳಿ ಬರುತ್ತಲೇ ಇವೆ. ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ಟಿವಿಕೆ ಶಾಸಕಾಂಗ ಪಕ್ಷದ ನಾಯಕ ಜೋಸೆಫ್ ವಿಜಯ್ ಎರಡು ಬಾರಿ ಭೇಟಿ ಮಾಡಿ ಸರ್ಕಾರ ರಚನೆಗೆ ಅವಕಾಶ ನೀಡುವಂತೆ ಮನವಿ ಮಾಡಿದ್ದಾರೆ. ಆದರೆ ನಿನ್ನೆ ರಾಜ್ಯಪಾಲರು ತಮ ನಿಲುವನ್ನು ಸ್ಪಷ್ಟಪಡಿಸಿದ್ದು, ಬಹುಮತಕ್ಕೆ ಅಗತ್ಯವಿರುವಷ್ಟು ಸಂಖ್ಯಾ ಬಲವನ್ನು ತೋರಿಸುವಂತೆ ಸಲಹೆ ನೀಡಿದ್ದಾರೆ. ಚರ್ಚೆಯ ನಡುವೆ ವಿಜಯ್ ಅವರು ತಮ ಬಹುಮತ ಸಾಬೀತಿಗೆ



ಶನಿವಾರದವರೆಗೂ ಕಾಲಾವಕಾಶ ನೀಡಬೇಕು.

ಈ ಮಧ್ಯೆ ಬೇರೆ ಯಾವುದೇ ಪಕ್ಷಕ್ಕೂ ಸರ್ಕಾರ ರಚಿಸಲು ಆಹ್ವಾನ ನೀಡಬಾರದು ಎಂದು ಮನವಿ ಮಾಡಿದ್ದಾರೆ. ಅದಕ್ಕೆ ರಾಜ್ಯಪಾಲರು ಸಹಮತ ಸೂಚಿಸಿರುವುದಾಗಿ ತಿಳಿದು ಬಂದಿದೆ.ಈವರೆಗೂ ಇಂಡಿ ಮೈತ್ರಿ ಕೂಟದಲ್ಲಿ ಗುರುತಿಸಿಕೊಂಡಿದ್ದ ಸಿಪಿಐಎಂ, ಸಿಪಿಐ, ಪಿಸಿಕೆ ಪಕ್ಷಗಳು ಟಿವಿಕೆಗೆ ಬೆಂಬಲ ನೀಡುವ ಸಂಬಂಧಪಟ್ಟಂತೆ ಇಂದು ಸಂಜೆ ಸಭೆ ಸೇರಿ ನಿರ್ಣಯ ಕೈಗೊಳ್ಳುವ ಪ್ರಯತ್ನದಲ್ಲಿದೆ. ಶತಾಯಗತಾಯ ಬಿಜೆಪಿಯನ್ನು ಅಧಿಕಾರದಿಂದ ದೂರ ಇಡಬೇಕು ಎಂಬ ಕಾರಣಕ್ಕಾಗಿ ಡಿಎಂಕೆ ಚರ್ಚೆ ನಡೆಸಿದ ಬಳಿಕ ಟಿವಿಕೆಗೆ ಬೆಂಬಲಿಸುವುದಾಗಿ ಘೋಷಿಸಿದೆ. ಈ ನಡುವೆ ಡಿಎಂಕೆ, ಎಐಎಡಿಎಂಕೆ ಮೈತ್ರಿಯ ಬಗ್ಗೆ ಚರ್ಚೆಗಳು ನಡೆಯುತ್ತಿವೆ ಎಂಬುದು ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿತ್ತು. ಅದನ್ನು ಸ್ಟಾಲಿನ್ ತಳ್ಳಿ ಹಾಕಿದ ಬಳಿಕವೂ ಕಾಂಗ್ರೆಸ್‌ನ ವಿರುಧುನಗರ ಸಂಸದ ಮಾಣಿಕಂ ಠ್ಯಾಗೂರ್ ಪುನರುಚ್ಚರಿಸಿದ್ದು, ಡಿಎಂಕೆ ಮತ್ತು ಎಐಎಡಿಎಂಕೆ ನಡುವೆ ಪರಸ್ಪರ ಮೈತ್ರಿಯ ಮಾತುಕತೆಗಳ ಸುಳಿವು ದೊರೆತ ಬಳಿಕವೇ ಕಾಂಗ್ರೆಸ್ ಡಿಎಂಕೆಯಿಂದ ಹೊರಬಂದು ಟಿವಿಕೆಗೆ ಬೆಂಬಲಿಸುವ ನಿರ್ಣಯ ಕೈಗೊಂಡಿದೆ ಎಂದಿದ್ದಾರೆ.

ಸುಮಾರು 4 ದಶಕಗಳ ಬದ್ಧ ವೈ–ರಿಗಳಾಗಿರುವ ಡಿಎಂಕೆ ಮತ್ತು ಎಐಎಡಿಎಂಕೆಯ ಮೈತ್ರಿ ಸಾಧ್ಯತೆಗಳ ಬಗ್ಗೆ ರೊಚ್ಚಿಗೆದ್ದಿರುವ ವಿಜಯ್ ಒಂದು ವೇಳೆ ಅಂತಹ ಬೆಳವಣಿಗೆ ಘಟಿಸಿದರೆ, ತಮ ಪಕ್ಷದ 108 ಶಾಸಕರಿಂದಲೂ ಸಾಮೂಹಿಕ ರಾಜೀನಾಮೆ ಕೊಡಿಸಿ, ಸಾಂವಿಧಾನಿಕ ಬಿಕ್ಕಟ್ಟು ಸೃಷ್ಟಿಯಾಗುವಂತೆ ಮಾಡುವುದು ಮತ್ತು ಮರು ಚುನಾವಣೆಯ ಸಾಧ್ಯತೆಗಳನ್ನು ಹುಟ್ಟು ಹಾಕುವ ಕಾರ್ಯತಂತ್ರ ರೂಪಿಸಿರುವುದಾಗಿ ಹೇಳಲಾಗಿದೆ. ಬಹುಮತ ಸಾಬೀತು ಪಡಿಸಬೇಕಿರುವುದು ಶಾಸನ ಸಭೆಯ ಒಳಗೆ ಹೊರತು, ಲೋಕಭವನದಲ್ಲಲ್ಲ ಎಂಬ ಸುಪ್ರೀಂಕೋರ್ಟ್‌ನ ತೀರ್ಪಿನ ಹೊರತಾಗಿಯೂ ತಮಿಳುನಾಡಿನ ರಾಜ್ಯಪಾಲರು ಕೆಲವು ತಾಂತ್ರಿಕ ಅಂಶಗಳನ್ನು ಮುಂದಿಟ್ಟುಕೊಂಡು

4ನೇ ಪುಟಕ್ಕೆ

# ಐಪಿಲ್ ಸ್ಥಳಾಂತರ :ಸರ್ಕಾರಕ್ಕೆ ಸಂಬಂಧವಿಲ್ಲ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಬೆಂಗಳೂರಿನಿಂದ ಐಪಿಎಲ್ ಕ್ರಿಕೆಟ್ ಫೈನಲ್ ಪಂದ್ಯ ಸ್ಥಳಾಂತರಕ್ಕೂ ರಾಜ್ಯ ಸರ್ಕಾರಕ್ಕೂ ಯಾವುದೇ ಸಂಬಂಧ ಇಲ್ಲ. ಅಹಮದಾಬಾದ್‌ನಲ್ಲಿ ಹೆಚ್ಚು ಆಸನಗಳ ವ್ಯವಸ್ಥೆ ಇದೆ ಎಂದು ಸ್ಥಳಾಂತರ ಮಾಡಿರಬಹುದು ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದರು.**

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿನ್ನಸ್ವಾಮಿ ಕ್ರಿಡಾಂಗಣದಿಂದ ಐಪಿಎಲ್ ಫೈನಲ್ ಪಂದ್ಯ ವರ್ಗಾವಣೆ ಮಾಡಿರುವ ವಿಚಾರಣೆ ಬಿಸಿಸಿಐ ಆರ್‌ಸಿಬಿಗೆ ಬಿಟ್ಟದ್ದು ನಮಗೂ ಅದಕ್ಕೂ ಸಂಬಂಧ ಇಲ್ಲ. ಅವರ ಒಪ್ಪಂದ ನಮಗೇನೂ ಗೊತ್ತಿಲ್ಲ ಎಂದರು. ಈ ಪಂದ್ಯಾವಳಿಗಳನ್ನು ವಾಣಿಜ್ಯ ದೃಷ್ಟಿಕೋನದಲ್ಲಿ ನೋಡಿದ್ದಾರೆ. ಆ ಕಾರಣಕ್ಕೆ ಸ್ಥಳಾಂತರ ಆಗಿರಬಹುದು. ಭದ್ರತೆ ಸೇರಿದಂತೆ




ಬೇರೆ ಯಾವ ವಿಚಾರದಲ್ಲೂ ಕೊರತೆಯಾಗದಂತೆ ನಾವು ಕ್ರಮ ಕೈಗೊಂಡಿದ್ದೇವೆ. ಕಡಿಮೆ ಸಮಯದಲ್ಲಿ ಭದ್ರತೆ ವ್ಯವಸ್ಥೆ ಮಾಡಿ ನ್ಯಾ. ಖುನ್ನಾ ವರದಿಯಂತೆ ಕ್ರಮಗಳನ್ನು ಕೈಗೊಂಡಿದ್ದೇವೆ ಎಂದು ಸ್ಪಷ್ಟಪಡಿಸಿದರು ರಾಜ್ಯದ ಶಾಸಕರು ಟಿಕೆಟ್ ಬೇಡಿಕೆ ಹೆಚ್ಚಿದ್ದರಿಂದ ಫೈನಲ್ ಪಂದ್ಯಾ ಸ್ಥಳಾಂತರವಾಗಿದೆ ಎಂಬ ವರದಿಗಳ ಬಗ್ಗೆ ಪ್ರತಿಕ್ರಿಯಿಸಿದ ಅವರು, ಹಾಗೇನಾದರೂ ಇದ್ದರೆ ಅದನ್ನು ಕ್ರಿಕೆಟ್ ಸಂಸ್ಥೆಯವರು ಹೇಳಬೇಕು. ಯಾರ್ಯಾರು ಎಷ್ಟು ಟಿಕೆಟ್ ತೆಗೆದಿದ್ದಾರೆ ಬಹಿರಂಗಪಡಿಸಲಿ ಎಂದರು ಆರ್‌ಸಿಬಿ ಅಭಿಮಾನಿಗಳಿಗೆ ಸರ್ಕಾರದಿಂದ ಮೋಸ ಆಗಿದೆ ಎಂಬ ವಿಪಕ್ಷಗಳ ಆರೋಪ ಸರಿಯಲ್ಲ. ಬಿಜೆಪಿ– ಜೆಡಿಎಸ್ ಕ್ರೀಡೆಗೆ ಏನು ಸಹಕಾರ ಕೊಟ್ಟಿದೆ ಎಂಬುದು ಗೊತ್ತಿದೆ. ಸುಮ್ಮನೆ ಆರೋಪ ಮಾಡುವುದು ತರವಲ್ಲ ಎಂದು ಗರಂ ಆಗಿ ಹೇಳಿದರು ತಮಿಳುನಾಡಿನಲ್ಲಿ ಸರ್ಕಾರ ರಚನೆ ವಿಳಂಬವಾಗಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸಂವಿಧಾನದಲ್ಲಿ ಕೆಲವು ಅಂಶಗಳಿವೆ. ಅದನ್ನು ರಾಜ್ಯಪಾಲರು ನೋಡುತ್ತಾರೆ ಕಾನೂನಿನಲ್ಲಿ ಏನಿದೆ ಎಂಬುದನ್ನು ನೋಡಿ ಕ್ರಮ ವಹಿಸುತ್ತಾರೆ. ಟಿವಿಕೆ ಪಕ್ಷದವರು ನ್ಯಾಯಾಲಯದ ಕದ ತಟ್ಟಬಹುದು ಎಂದು ಪರಮೇಶ್ವರ್ ಹೇಳಿದರು.

## ರಿಂಗ್ ರೋಡ್ ಗೆ ಅನುಮತಿ :ರಾಜಶೇಖರ ರಾಮಸ್ವಾಮಿ ಗೆ ಡಾ. ಬಾಬುರಾವ್ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಿಂಗ್ ರೋಡ್ ಗೆ ಅನುಮೋದನೆ ದೊರೆತಿರುವ ಹಿನ್ನೆಲೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ ಅವರಿಗೆ ಸಮಾಜ ಸೇವಕ ಡಾ.ಬಾಬುರಾವ್ ಅವರ ನೇತೃತ್ವದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.**

ಗೌರವ ಸನ್ಮಾನ ಸ್ವೀಕರಿಸಿ ಮಾತನಾಡಿದ ರಾಜಶೇಖರ ರಾಮಸ್ವಾಮಿ ಯವರು ನಗರಾಭಿವೃದ್ಧಿ ಪ್ರಾಧಿಕಾರದ ಸಾಮಾನ್ಯ ಸಭೆಯಲ್ಲಿ ನಗರಕ್ಕೆ ಅವಶ್ಯವಾಗಿರುವ ರಿಂಗ್ ರೋಡ್ ಡಿಪಿಆರ್ ಕೈಗೊಳ್ಳಲು ತೀರ್ಮಾನಿಸಲಾಗಿದೆ. ರಿಂಗ್ ರೋಡ್ ಅಗತ್ಯತೆ ಕುರಿತು ಡಾ.ಬಾಬುರಾವ್ ಅವರು ಮನವಿ ಸಲ್ಲಿಸಿದ್ದರು. ಈ ವಿಚಾರವನ್ನು ಸಾಮಾನ್ಯ ಸಭೆಯಲ್ಲಿ ಮಂಡಿಸಿದಾಗ, ವಿಧಾನ ಪರಿಷತ್ ಸದಸ್ಯ ಎ..ವಸಂತಕುಮಾರ, ಆಯುಕ್ತರು ಹಾಗೂ ಸದಸ್ಯರ ಸಮಕ್ಷಮದಲ್ಲಿ ರಿಂಗ್ ರೋಡ್ ನಿರ್ಮಾಣಕ್ಕೆ ಒಪ್ಪಿಗೆ ಪಡೆದು 48 ಲಕ್ಷ ರೂ.ವೆಚ್ಚದಲ್ಲಿ ಡಿಪಿಆರ್ ಕೈಗೊಳ್ಳಲು ತೀರ್ಮಾನಿಸಲಾಗಿದ್ದು 15 ದಿನಗಳೊಳಗೆ ಇದಕ್ಕೊಂದು ಪರಿಪೂರ್ಣ ರೂಪುರೇಷೆ ತಯಾರಿಸಲಾಗುವುದೆಂದರು. ನಂತರ ಡಾ.ಬಾಬುರಾವ್ ಮಾತನಾಡಿ, 800ಕ್ಕೂ ಹೆಚ್ಚು ಬಲಿ ಪಡೆದಿರುವ ರಸ್ತೆಯ ಒತ್ತಡ ಕಡಿಮೆ ಮಾಡಲು ರಿಂಗ್ ರೋಡ್



ಅವಶ್ಯಕತೆ ಇರುವುದನ್ನು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಿಗೆ ಜನರ ಪರವಾಗಿ ಮನವಿ ಸಲ್ಲಿಸಲಾಗಿತ್ತು. ಈಗ ಅದಕ್ಕೆ ಸ್ಪಂದನೆ ಸಿಕ್ಕಿರುವುದರಿಂದ ಅಧ್ಯಕ್ಷರಿಗೆ ಗೌರವಿಸಿ ಸನ್ಮಾನಿಸಲಾಗಿದೆ ಎಂದರು. ಸೋಮಶೆಟ್ಟಿ ಶ್ರೀನಿವಾಸ, ಎಂ.ಎ.ಖಾಜಾ, ಕಲೀಂ ಅಹ್ಮದ್ ಆಶಾಪೂರ, ಎಂ.ಅಜ್ಮತ್, ಅಬ್ದುಲ್ ಕರೀಂ, ಎಂ.ಡಿ.ನವಾಜ್, ಜೈಪಾಲ್, ಪ್ರದೀಪ್ ಸೇರಿದಂತೆ ಇತರರು ಇದ್ದರು.

## "ನಾಳೆ ಮಹರ್ಷಿ ವಾಲ್ಮೀಕಿ ವೃತ್ತ, ಕಂಚಿನ ಪ್ರತಿಮೆ ಅನಾವರಣ :ಜಿ.ಹಂಪಯ್ಯ ನಾಯಕ"

ನೈಜ್ಯ ದೆಸೆ ನ್ಯೂಸ್

**ಸಿರವಾರ: ತಾಲ್ಲೂಕಿನ ಬಲ್ಲಟಗಿ ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ ವೃತ್ತ, ವಾಲ್ಮೀಕಿ ಅವರ ಕಂಚಿನ ಪ್ರತಿಮೆ ಅನಾವರಣ ಕಾರ್ಯಕ್ರಮ ಮೇ 9 ರಂದು ನಡೆಯಲಿದೆ ಎಂದು ಮಾನ್ವಿ ಶಾಸಕ ಜಿ.ಹಂಪಯ್ಯ ನಾಯಕ ಹೇಳಿದರು.**

ಪಟ್ಟಣದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ‘ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದ ಪುರಿ ಸ್ವಾಮೀಜಿ, ಗೋಲಪಲ್ಲಿ ಮಠದ ವರಧನೇಶ್ವರ ಸ್ವಾಮೀಜಿ, ಕರೆಗುಡ್ಡ ಮಠದ ವಿಜಯ ಮಹಾಂತೇಶ್ವರ ಸ್ವಾಮೀಜಿ ಸಾನ್ನಿಧ್ಯದಲ್ಲಿ ಕಾರ್ಯಕ್ರಮದ ನಡೆಯಲಿದೆ. ಪ್ರತಿಮೆಯನ್ನು ಸಚಿವ ಸತೀಶ ಜಾರಕಿಹೊಳಿ ಅನಾವರಣಗೊಳಿಸಲಿದ್ದು, ಸಚಿವರಾದ ಡಾ.ಶರಣಪ್ರಕಾಶ ಪಾಟೀಲ, ಎನ್.ಎಸ್.ಬೋಸರಾಜು, ಸಂಸದ ಜಿ.ಕುಮಾರ



ನಾಯಕ ಸೇರಿದಂತೆ ಸಮಾಜದ ಹಿರಿಯ ಮುಖಂಡರು ಹಾಲಿ ಮತ್ತು ಮಾಜಿ ಶಾಸಕರು ಭಾಗವಹಿಸಲಿದ್ದಾರೆ’ ಎಂದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ತಾಲ್ಲೂಕು ಘಟಕದ ಅಧ್ಯಕ್ಷ ಬ್ರಿಜೇಶ ಪಾಟೀಲ, ಮುಖಂಡರಾದ ಚುಕ್ಕಿ ಶಿವಕುಮಾರ, ಪ.ಪಂ.ಅಧ್ಯಕ್ಷ ಹಾಜಿ ಚೌದ್ರಿ, ಅಚ್ಚಾ ವೈಜನಾಥ, ಜಿ.ವೀರೇಶ, ವೈ.ಭೂಪನ ಗೌಡ, ಎಂ.ನಿಂಬಯ್ಯಸ್ವಾಮಿ, ಕಲ್ಲೂರು ಬಸವರಾಜ ನಾಯಕ, ಸೂರಿ ದುರುಗಣ್ಣ, ಉಮಾಶಂಕರ ನಾಯಕ, ಬೆಳವಿನೂರ ಶಿವರಾಜ ಗೌಡ ಹಸೇನಲಿ, ಮೌಲಸಾಬ್ ವರ್ಚಸ್, ಲಕ್ಷ್ಮೀಕಾಂತ, ಎಂ,ಅಬ್ರಹಾಂ ಹೊನ್ನಟಗಿ, ಶಿವಪ್ಪ ಹಳ್ಳಿ ಹೊಸೂರು, ವೆಂಕಟೇಶ ದೊರೆ, ರಂಗನಾಥ ಭೋವಿ ಇದ್ದರು.

# ಬೀದಿ ಬದಿ ವ್ಯಾಪಾರಿಗಳು ನಡೆಸಿದ 26 ದಿನಗಳ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ತಾತ್ಕಾಲಿಕ ಹಿಂಪಡೆತ

ನೈಜ್ಯ ದೆಸೆ ನ್ಯೂಸ್

**ಮೇ.5 ರಂದು ಬೀದಿ ಬದಿ ವ್ಯಾಪಾರಿಗಳ ಹೋರಾಟ ಸಮಿತಿಯ ನಿಯೋಗವು ಶಾಸಕರಾದ ಹಂಪನಗೌಡ ಬಾದರ್ಲಿಯವರ ನೇತೃತ್ವದಲ್ಲಿ ಬೀದಿ ವ್ಯಾಪಾರಿಗಳ ಸಮ್ಮುಖದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನ ಭೇಟಿಯಾಗಿ ಚರ್ಚಿಸಲಾಯಿತು.**

ತೋಟಗಾರಿಕೆಯ ಇಲಾಖೆಯ ಜಾಗ ಪಾಳು ಬಿದ್ದಿದ್ದು, ಆ ಜಾಗದ ಕುರಿತು ಮುಖ್ಯಮಂತ್ರಿಯವರಿಗೆ ವಿವರಣೆ ನೀಡಲಾಯಿತು. ಮುಖ್ಯವಾಗಿ ಗಂಗಾವತಿ ರಸ್ತೆಯ ಬಲಭಾಗದ 15 ಮೀಟರ್ ರಸ್ತೆ ಹಾಗೂ ಫುಟ್ ಪಾತ್ ಜಾಗಬಿಟ್ಟು ಇನ್ನೂ 20 ಫೀಟ್ ಜಾಗ ಉಳಿಯುತ್ತಿದ್ದು, ಎಡ ಭಾಗದಲ್ಲಿ 40 ಫೀಟ್ ಅಂತರದಲ್ಲಿ ಬಿಲ್ಡಿಂಗ್ ಗಳು ಸರ್ಕಾರಿ ಜಾಗವನ್ನು ಅತಿ–ಕ್ರಮಿಸುವೆ ಆದರೂ ವಾಹನಗಳು ಯಾವುದೇ ತೊಂದರೆ ಇಲ್ಲದೆಯೇ ಓಡಾಡುತ್ತಿವೆ.

ಬಲ ಭಾಗದಲ್ಲಿ 10 ಫೀಟ್ ಜಾಗ ಕೊಟ್ಟರೆ, ಇನ್ನೂ 60 ಫೀಟ್ ರಸ್ತೆಗೆ ಉಳಿಯುತ್ತದೆ.



ಸಿಂಧನೂರಿನಲ್ಲಿ ಬೈಪಾಸ್ ರಸ್ತೆ ನಿರ್ಮಾಣ ಯೋಜನೆ ಇರುವುದರಿಂದ ಮುಂದಿನ ದಿನಗಳಲ್ಲಿ ನಗರದಲ್ಲಿ ವಾಹನಗಳ ಓಡಾಟ ಕಡಿಮೆಯಾಗುತ್ತದೆ ಎಂದು ಮುಖ್ಯಮಂತ್ರಿಗಳಿಗೆ ತಿಳಿಸಲಾಯಿತು. 10̸10 ಜಾಗವನ್ನು ತಿಂಗಳ ಬಾಡಿಗೆ ನಿಗದಿ ಮಾಡಿ ಕೊಡಬೇಕು ಎಂದು ವಿನಂತಿಸಲಾಯಿತು. ಮುಖ್ಯಮಂತ್ರಿಗಳು ಸಭೆಯಲ್ಲಿ ಭಾಗವಹಿಸಿದ್ದ ತೋಟಗಾರಿಕೆ ಇಲಾಖೆಯ ಕಾರ್ಯದರ್ಶಿ ಗಿರೀಶ್ ಅವರಿಂದ ಮಾಹಿತಿ ಪಡೆದುಕೊಂಡು, ಆದಷ್ಟು ಬೇಗನೆ ಜಾಗವನ್ನು ತಾತ್ಕಾಲಿಕವಾಗಿ ಬಾಡಿಗೆ ಕೊಡುವ ಆದೇಶ ಮಾಡಲು ತಿಳಿಸಿದರು. ತೋಟಗಾರಿಕೆ ಇಲಾಖೆಯವರು ತಮ್ಮ ಇಲಾಖೆಯ ಕಾನೂನು ಸಲಹೆ ಪಡೆದು ಮುಂದಿನ ಕ್ರಮವನ್ನು ಕೈಗೊಳ್ಳುವುದಾಗಿ ತಿಳಿಸಿದರು.

ಭೂಕಬಳಿಕೆ ನಿಷೇಧ ಕೋರ್ಟಿನ ಆದೇಶ ಸಿಂಧನೂರು ನಗರದಲ್ಲಿ ದೊಡ್ಡಗೊಂದಲವನ್ನೇ ಉಂಟುಮಾಡಿ ಸಾವಿರಾರು ಕುಟುಂಬಗಳಿಗೆ ಸಂಕಷ್ಟವನ್ನುಂಟು ಮಾಡಿದೆ. ರಾಜ್ಯದ ಯಾವುದೇ ಜಿಲ್ಲೆಯಲ್ಲಿ ನಡೆಯದಂತ ಕಾರ್ಯಾಚರಣೆ ಸಿಂಧನೂರಿನಲ್ಲಿ ನಡೆಯಿತು. ಈ ಸಂಕಷ್ಟ ಕಾರಣದಿಂದ ನೂರಾರು ಜೀವಗಳು ನಷ್ಟವಾಗಿವೆ. ಸಾಲಭಾದೆಯಿಂದ 3 ಜನ ಬೀದಿ ವ್ಯಾಪಾರಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ವಾಸ್ತವ ಸ್ಥಿತಿಯನ್ನು ಮುಖ್ಯಮಂತ್ರಿಗಳಿಗೆ ಹಾಗೂ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಅಧಿಕಾರಿಗಳಿಗೆ ತಿಳಿಸಲಾಯಿತು. ರಸ್ತೆಯಲ್ಲಿ, ಹೂವು, ಹಣ್ಣು, ತರಕಾರಿ ಸೇರಿದಂತೆ ಇತರೆ ವಸ್ತುಗಳನ್ನು ಮಾರಾಟ ಮಾಡುವ ತಳ್ಳು ಬಂಡಿಯ ವ್ಯಾಪಾರಿಗಳಿಗೆ ಯಾವುದೇ ತೊಂದರೆ ಕೊಡದಂತೆ ಸೂಕ್ತ ರಕ್ಷಣೆ ಕೊಡಬೇಕೆಂದು ವಿನಂತಿಸಲಾಯಿತು. ಮುಖ್ಯಮಂತ್ರಿಗಳು ನಮ್ಮ ಎಲ್ಲಾ ಬೇಡಿಕೆಗಳನ್ನು ಪರಿಹರಿಸಲು ಒಪ್ಪಿಕೊಂಡು ಸ್ಪಂದಿಸಿದ್ದಾರೆ.

ಈ ಹಿನ್ನೆಲೆಯಲ್ಲಿ 2026 ಮೇ 8 ರಿಂದ ಧರಣಿ ಸತ್ಯಾಗ್ರಹದ ಪ್ರತಿಭಟನೆಗೆ ಹಾಕಿದ್ದ ಟೆಂಟ್ ನಲ್ಲಿ ಸಭೆ ನಡೆಸಿ 26ನೇ ದಿನದಲ್ಲಿ ಮುಂದುವರಿದಿರುವ ಧರಣಿ ಸತ್ಯಾಗ್ರಹವನ್ನು ಹಿಂಪಡಿಯಲಾಯಿತು ಒಂದು ತಿಂಗಳಲ್ಲಿ ಜಾಗದ ಸಮಸ್ಯೆ ಪರಿಹರಿಸದಿದ್ದರೆ, ಪುನಃ ಹೋರಾಟ ರೂಪಿಸಲು ತೀರ್ಮಾನಿಸಿ 26ನೇ ದಿನದ ಮುಕ್ತಾಯದ ಸಭೆಯನ್ನು ಉದ್ದೇಶಿಸಿ ಸಿಪಿಐಎಂಎಲ್ ಮಾಸ್ ಲೈನ್ ರಾಜ್ಯ ಕಾರ್ಯದರ್ಶಿ ಹಾಗೂ ಹೋರಾಟ ಸಮಿತಿಯ ಮುಖಂಡರಾದ ಡಿ.ಎಚ್.ಪೂಜಾರ್, ಚಂದ್ರಶೇಖರ ಗೊರೆಬಾಳ, ಜಮಾಅತೆ ಇಸ್ಲಾಂ ಹಿಂದ್ ತಾಲೂಕು ಅಧ್ಯಕ್ಷ ಹುಸೇನ್ ಸಾಬ್, ಹಾಗೂ ಸಂಚಾಲಕ ಬಸವರಾಜ ಬಾದರ್ಲಿ, ಮಾತನಾಡಿದರು. ಈ ಸಂಧರ್ಭದಲ್ಲಿ: ರಮೇಶ ಪಾಟೀಲ್ ಬೇರ್ಗಿ, ಬಿ.ಎನ್.ಯರದಿಹಾಳ, ಖಾಸಿಂಸಾಬ್, ಅಸ್ಲಾಂ ಪಾಷಾ, ರಹೀಂಸಾಬ್ ಜಾಗೀರದಾರ್ ಹಾರೂನ್ ಸಾಬ್ ಜಾಗೀರದಾರ್, ಜಾಭಿರ್ಪಾಶಾ, ರಸೂಲ್ ಸಾಬ್, ಬಸವರಾಜ, ಯಾಕೂಬ್ ಸಾಬ್. ರಮೇಶ ರೇಡಿಯಂ. ರವೂಫ್, ಶಾಮೀದ್ ರೈಯರ್, ಶೇಖಸಾಬ್, ಮೌಲಸಾಬ್, ಹಾಜೀಮ್ ಮೆಕಾನಿಕ್, ಹುಸೇನ್ ಸಾಬ್, ಇದ್ದರು.

## ಸಾಹಿತ್ಯ ಸಿಂಚನ

ತಂಗಿ

ಅಮ್ಮನ ಮಡಿಲಿನ ನಂತರ
ಅಪ್ಪನ ಪ್ರೀತಿಯ ನಂತರ
ಮನೆ ತುಂಬ ನಗು ತುಂಬೋಳು
ಅವಳೇ ನಮ್ಮ ಚಂದದ ತಂಗಿ

ಜಗಳ ಆಡಿದ್ರೂ ಒಂದು ನಿಮಿಷ
ಮುನಿಸಿಕೊಂಡ್ರೂ ಎರಡು ನಿಮಿಷ
"ಅಣ್ಣಾ" ಅಂತ ಕರೆದರೆ ಸಾಕು
ಎಲ್ಲ ಕೋಪ ಮಾಯ ಆಗುತ್ತೆ

ನನ್ನ ಪಾಕೆಟ್ ಮನಿ ಕದಿಯೋಳು
ಚಾಕ್ಲೆಟ್ ತಿಂದು ಸಿಕ್ಕಿಬೀಳೋಳು
ಅಮ್ಮನ ಬಳಿ ಬೈಸಿಕೊಂಡ್ರೂ
ನನ್ನ ಹಿಂದೆಯೇ ಬಚ್ಚಿಟ್ಟುಕೊಳ್ಳೋಳು

ರಾಖಿ ಕಟ್ಟಿ "ಕಾಪಾಡು ಅಣ್ಣಾ" ಅಂತಾಳೆ
ನಾನೇ ಅವಳ ಮೊದಲ ಹೀರೋ
ಕಷ್ಟ ಬಂದಾಗ ಅವಳ ಕಣ್ಣೀರು
ನನ್ನ ಎದೆಗೆ ಬಿದ್ದ ಬಾಣ

ಮದುವೆ ಆಗಿ ಹೋದ ಮೇಲೂ
"ಅಣ್ಣಾ ಹೇಗಿದೀಯಾ" ಅಂತ ಫೋನ್ ಮಾಡೋಳು
ಅವಳ ನಗುವಿಗಾಗಿ ನಾನು
ಯಾವ ಯುದ್ಧಕ್ಕೂ ರೆಡಿ ಗುರು

ತಂಗಿ ಇಲ್ಲದ ಮನೆಗೆ
ಬೆಳಕೇ ಇಲ್ಲ
ಅವಳ ಕಿಲಕಿಲ ನಗುವೇ
ನನ್ನ ಮನೆ ಪ್ರಪಂಚ....

ಎಸ್. ದುರಗಪ್ಪ.ಕುಷ್ಟಗಿ.

## ಸಕಾಲದಲ್ಲಿ ಮಾಹಿತಿ ನೀಡದ ಅಧಿಕಾರಿಗಳಿಗೆ ದಂಡ ವಿಧಿಸಲಾಗಿದೆ: ಬಿ. ವೆಂಕಟಸಿಂಗ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಸಕಾಲಕ್ಕೆ ಮಾಹಿತಿ ನೀಡಲು ನಿರ್ಲಕ್ಷ್ಯ ವಹಿಸುವುದು ಸೇರಿದಂತೆ ವಿಚಾರಣೆಗೆ ಗೈರು ಹಾಜರಾಗಿ ಆಯೋಗದ ನೋಟಿಸ ಗೆ ಸ್ಪಂದನೆ ನೀಡದ ಕಾರಣ ಕಲ್ಬುರ್ಗಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ,**

ಹಾಗೂ ಗಂಗಾವತಿ ತಾಲೂಕು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯ ಪಾಲಾನಾ ಅಭಿಯಂತರ ದೇವಣ್ಣ ಕಟ್ಟಿ, ರಾಯಚೂರು ತಾಲೂಕು ಗ್ರೇಡ್ – 2 ತಹಸೀಲ್ದಾರ್ ಪರಶುರಾಮ್ ಸೇರಿ ಹಲವು ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಗ್ರಾಮ ಪಂಚಾಯತ ಕಾರ್ಯದರ್ಶಿಗಳಿಗೆ ರಾಜ್ಯ ಮಾಹಿತಿ ಆಯೋಗದ ಕಲ್ಬುರ್ಗಿ ಪೀಠ ದಿಂದ ದಂಡ ವಿಧಿಸಿ ಆದ–'ಶ ಮಾಡಲಾಗಿದೆ ಎಂದು ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ತಿಳಿಸಿದ್ದಾರೆ. ಏಪ್ರಿಲ್ ತಿಂಗಳಿನಲ್ಲಿ ನಡೆದ ವಿಚಾರಣೆ ವೇಳೆ ಗೈರು ಹಾಜರಾಗಿದ್ದಲ್ಲದೆ, ಮಾಹಿತಿ ನೀಡದ ಕಾರಣ ಕಲ್ಬುರ್ಗಿ



ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶ್ರೀ ಲಕ್ಷ್ಮಣ ಶೃಂಗೇರಿಗೆ 10 ಸಾವಿರ, ಗಂಗಾವತಿ ತಾಲೂಕು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಶ್ರೀ ದೇವಣ್ಣ ಕಟ್ಟಿಗೆ 15 ಸಾವಿರ,ರಾಯಚೂರು ತಾಲೂಕು ಗ್ರೇಡ್ 2 ತಹಸೀಲ್ದಾರ್ ಪರಶುರಾಮ ಗೆ 5 ಸಾವಿರ,ಜೇವರ್ಗಿ ತಾಲೂಕಿನ ಹುಲ್ಲೂರ ಗ್ರಾ.ಪಂ ಕಾರ್ಯದರ್ಶಿ ಮಲ್ಲಿಕಾರ್ಜುನಗೆ 5 ಸಾವಿರ, ಸುರುಪುರ ತಾಲೂಕಿನ ಆಲ್ದಾಳ ಗ್ರಾ.ಪಂ. ಕಾರ್ಯದರ್ಶಿ ರಾಜಕುಮಾರ ಸುಬೆದಾರಗೆ 10 ಸಾವಿರ, ಮಟ್ಟಿ ತಾಲೂಕಿನ ಆರೋಲಿ ಗ್ರಾಪಂ ಪಿ.ಡಿ.ಓ ರಘುನಾಥಗೆ 5 ಸಾವಿರ, ಆಳಂದ ತಾಲೂಕಿನ ಯಲಸಂಗಿ ಗ್ರಾ.ಪಂ ಪಿ.ಡಿ.ಓ ಜಗದೀಶಗೆ 15 ಸಾವಿರ,

ಸುರಪುರ ತಾಲೂಕಿನ ನಗನೂರು ಗ್ರಾಪಂ ಕಾರ್ಯದರ್ಶಿಯಾದ ಮಡಿವಾಳಪ್ಪಗೆ 10 ಸಾವಿರ, ಶಹಪುರ ತಾಲೂಕಿನ ಗೋಗಿ. ಕೆ. ಗ್ರಾ.ಪಂ. ಪಿ.ಡಿ.ಓ. ಸಿದ್ರಾಮಗೆ 10 ಸಾವಿರ, ಸಂಡೂರು ತಾಲೂಕಿನ ಹೊಸದರೋಜ ಗ್ರಾಪಂ ಕಾರ್ಯದರ್ಶಿ ಕಲ್ಲಪ್ಪಗೆ 10 ಸಾವಿರ, ಯಾದಗಿರ ತಾಲೂಕಿನ ಸೈದಾಪುರ ಗ್ರಾ.ಪಂ ಪಿ.ಡಿ.ಓ ಮುದುಕಪ್ಪಗೆ 10 ಸಾವಿರ, ವಡಗೇರಾ ತಾಲೂಕಿನ ತಡಿಬಿಡಿ ಗ್ರಾ.ಪಂ. ಕಾರ್ಯದರ್ಶಿ ಯಂಕನಗೌಡಗೆ 5 ಸಾವಿರ, ಕಾರಟಗಿ ತಾಲೂಕಿನ ಸಿದ್ದಾಪುರ ಗ್ರಾಪಂ ಕಾರ್ಯದರ್ಶಿ ಶ್ರೀಮತಿ ಜೋತಿ ರೆಡ್ಡರ್ಗೆ 10 ಸಆವಿರ ಕಲ್ಬುರ್ಗಿ ತಾಲೂಕಿನ ಹಾಗಾರಗ ಗ್ರಾ.ಪಂ. ಕಾರ್ಯದರ್ಶಿ ವೇದಾಂಗಗೆ 5 ಸಾವಿರ, ಲಿಂಗಸೂಗೂರು ತಾಲೂಕಿನ ಪೈದೊಡ್ಡಿ ಗ್ರಾ.ಪಂ.ನ ಕಾರ್ಯದರ್ಶಿ ಭೀಮಣ್ಣಗೆ 10 ಸಾವಿರ, ಯಾದಗಿರ ತಾಲೂಕಿನ ರಾಮ ಸಮುದ್ರ ಗ್ರಾ.ಪಂ. ಕಾರ್ಯದರ್ಶಿ ಗಾಲಿಬಸಾಬ ಗೆ 5 ಸಾವಿರ ಹಾಗೂ ರಾಯಚೂರು ತಾಲೂಕಿನ ಗ್ರೇಡ್–2 ತಹಶೀಲದಾರ ಪರುಶುರಾಮಗೆ 5 ಸಾವಿರ ಸೇರಿ ಒಟ್ಟು 18 ಅಧಿಕಾರಿಗಳಿಗೆ ಏಪ್ರೀಲ್ ತಿಂಗಳಿನಲ್ಲಿ 1 ಲಕ್ಷ 50 ಸಾವಿರ ದಂಡ ವಿಧಿಸಲಾಗಿದೆ ಎಂದು ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏಪ್ರೀಲ್ ತಿಂಗಳಲ್ಲಿ 564 ಪ್ರಕರಣಗಳು ವಿಚಾರಣೆಗೆ ಕೈಗೆತ್ತಿಕೊಂಡು 229 ಪ್ರಕರಣಗಳು ವಿಲೇವಾರಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ತಾವು ಅಧಿಕಾರ ಸ್ವೀಕರಿಸಿದ ಬಳಿಕ ಒಟ್ಟು 3,084 ಪ್ರಕರಣಗಳು ಕೈಗೆತ್ತಿಕೊಂಡು 88 ದಿನ ವಿಚಾರಣೆ ನಡೆಸಿ 1,308 ಪ್ರಕರಣಗಳು ವಿಲೇವಾರಿ ಮಾಡಿರುವುದಾಗಿ ಆಯುಕ್ತರಾದ ಬಿ. ವೆಂಕಟ ಸಿಂಗ್ ತಿಳಿಸಿದ್ದಾರೆ. ಪ್ರಕರಣಗಳ ತ್ವರಿತ ವಿಲೇವಾರಿಗೆ ಅನೂಕೂಲವಾಗಲು ಅಧಿಕಾ–ರಿಗಳಿಗೆ ಮಾಹಿತಿ ಹಕ್ಕು ಅಧಿನಿಯಮ ಕು–ರಿತು ಅರಿವು ಮುಡಿಸಲು ಈಗಾಗಲೇ ಬಳ್ಳಾರಿ, ಬೀದರ್, ಕಲ್ಬುರ್ಗಿ ಹಾಗೂ ಕೊಪ್ಪಳದಲ್ಲಿ ಕಾರ್ಯಗಾರ ನಡೆಸಿದ್ದು ಈ ತಿಂಗಳ 30 ರಂದು ವಿಜಯನಗರ ಜಿಲ್ಲೆಯಲ್ಲಿ ಕಾರ್ಯಗಾರ ಹಮ್ಮಿಕೊಂಡಿರುವುದಾಗಿ ತಿಳಿಸಿದ್ದಾರೆ.

## "ಸರ್ವಿಸ್ ರಸ್ತೆಯಲ್ಲಿ ವಾಹನ ನಿಲುಗಡೆ ಪಾದಚಾರಿ ಮಾರ್ಗ ಒತ್ತುವರಿ"

ನೈಜ್ಯ ದೆಸೆ ನ್ಯೂಸ್

ಮಸ್ಕಿ: ಪಟ್ಟಣದಲ್ಲಿ ಪಾದಾಚಾರಿ ರಸ್ತೆ ಹಾಗೂ ಸರ್ವಿಸ್ ರಸ್ತೆಗಳು ಅವ್ಯವಸ್ಥೆಯಿಂದ ಕೂಡಿದ್ದು ಪಟ್ಟಣದ ಹಳೆಯ ಬಸ್ ನಿಲ್ದಾಣ ಪ್ರದೇಶದಲ್ಲಿ ಸರ್ವಿಸ್ ರಸ್ತೆಯಲ್ಲಿ ಅಡ್ಡಾದಿಡ್ಡಿ ವಾಹನ ನಿಲುಗಡೆ, ಪಾದಚಾರಿ ಮಾರ್ಗಗಳ ಒತ್ತುವರಿ ಸಾರ್ವಜನಿಕರು ನಿತ್ಯ ಪರದಾಡುವಂತಾಗಿದೆ.

ಅಶೋಕ ವೃತ್ತದಿಂದ ಬಸವೇಶ್ವರ ವೃತ್ತದವರೆಗೆ ನಿರ್ಮಿಸಿರುವ ಅವೈಜ್ಞಾನಿಕ ಸರ್ವಿಸ್ ರಸ್ತೆ ಹಾಗೂ ಪಾದಚಾರಿ ಮಾರ್ಗಗಳು ಜನ–ರಿಗೆ ಅನುಕೂಲಕ್ಕಿಂತ ಅನಾನುಕೂಲವೇ ಹೆಚ್ಚಾಗಿ ಪರಿಣಮಿಸಿವೆ ಎಂಬ ಆರೋಪ ಕೇಳಿಬರುತ್ತಿದೆ. ರಸ್ತೆಯ ಎರಡೂ ಬದಿಗಳಲ್ಲಿ ಬೈಕ್, ಕಾರುಗಳನ್ನು ನಿಯಮ ಉಲ್ಲಂಘನೆ ಮಾಡಿ ನಿಲ್ಲಿಸಲಾಗುತ್ತಿದ್ದು,



ಸಂಚಾರ ದಟ್ಟಣೆ ಉಂಟಾಗುತ್ತಿದೆ. ಇದರಿಂದ ಪಾದಚಾರಿಗಳು ರಸ್ತೆ ಮಧ್ಯೆ ನಡೆದು ಹೋಗುವ ಅನಿವಾರ್ಯ ಪರಿಸ್ಥಿತಿ ನಿರ್ಮಾಣವಾಗಿದೆ.

ಸರ್ವಿಸ್ ರಸ್ತೆಯಲ್ಲೇ ತಳ್ಳುಬಂಡಿ, ಡಬ್ಬಾ ಅಂಗಡಿ ಹಾಗೂ ವಿವಿಧ ವ್ಯಾಪಾರ ಚಟುವಟಿಕೆಗಳು ಹೆಚ್ಚಾಗಿರುವುದರಿಂದ ವಾಹನ ಸಂಚಾರಕ್ಕೆ ತೊಂದರೆ ಉಂಟಾಗುತ್ತಿದೆ. ಕೆಲವು ಅಂಗಡಿಗಳ ಮುಂದೆ ಗ್ರಾಹಕರು ವಾಹನಗಳನ್ನು ಅಡ್ಡಾದಿಡ್ಡಿಯಾಗಿ ನಿಲ್ಲಿಸುತ್ತಿರುವುದ–ರಿಂದ ಪರಿಸ್ಥಿತಿ ಮತ್ತಷ್ಟು ಗಂಭೀರವಾಗಿದೆ. ಪಾದಚಾರಿ ಮಾರ್ಗಗಳ ಮೇಲೆಯೇ ವ್ಯಾಪಾರ ನಡೆಸುತ್ತಿರುವುದರಿಂದ ಮಹಿಳೆಯರು, ವೃದ್ಧರು ಹಾಗೂ ಶಾಲಾ ಮಕ್ಕಳಿಗೆ ಹೆಚ್ಚು ತೊಂದರೆಯಾಗುತ್ತಿದೆ.

ಜನಸಂದಣಿ ಹೆಚ್ಚಿರುವ ಈ ಪ್ರದೇಶದಲ್ಲಿ ಅಪಘಾತ ಸಂಭವಿಸುವ ಭೀತಿ ಕೂಡ ಸಾರ್ವಜನಿಕರಲ್ಲಿ ಮೂಡಿದೆ. ಪುರಸಭೆ ಹಾಗೂ ಪೊಲೀಸ್ ಇಲಾಖೆ ಅಧಿಕಾ–ರಿಗಳು ಈ ಸಮಸ್ಯೆ ಕುರಿತು ಗಮನ ಹರಿಸದೆ ನಿರ್ಲಕ್ಷ್ಯ ತೋರಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ತಕ್ಷಣ ಪಾದಾಚಾರಿ ರಸ್ತೆ ಒತ್ತುವರಿ ಹಾಗೂ ಸರ್ವಿಸ್ ರಸ್ತೆಯಲ್ಲಿ ಸುಗಮ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಕ್ರಮ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ 14ನೇ ವಾರ್ಡ್ ವ್ಯಾಪ್ತಿಯಲ್ಲಿ ಬುಧವಾರ ಕೋನಾಪುರಪೇಟೆಯ ಸರ್ಕಾರಿ ಶಾಲೆ ಹತ್ತಿರ ಬುಧವಾರ ಹೊಸದಾಗಿ ಕೊಳವೆಬಾವಿ ಕೊರೆಯಿಸಲಾಯಿತು. ಈ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ದೊರೆತಿದೆ ಎಂದು ಸ್ಥಳೀಯ ನಿವಾಸಿಗಳು ಹರ್ಷ ವ್ಯಕ್ತಪಡಿಸಿದರು.**




ಮುಖಂಡ ಶಿವರಾಜ ನಾಯಕ ಮಾತನಾಡಿ, 'ನಗರೋತ್ಥಾನ ಯೋಜನೆ ಅಡಿಯಲ್ಲಿ ಪುರಸಭೆ ಹಾಗೂ ಕರ್ನಾಟಕ ನಗರ ನೀರು ಹಾಗೂ ಒಳಚರಂಡಿ ಮಂಡಳಿಯ ಅನುದಾನದಲ್ಲಿ ಹೊಸದಾಗಿ ಬೋರ್‌ವೆಲ್ ಕೊರೆಯಿಸಲಾಗಿದೆ. ಪುರಸಭೆಯ ವತಿಯಿಂದ 14ನೇ ವಾರ್ಡ್ ವ್ಯಾಪ್ತಿಯ ನಿವಾಸಿಗಳಿಗೆ ಸಮರ್ಪಕವಾಗಿ ಕುಡಿಯುವ ನೀರಿನ ವ್ಯವಸ್ಥೆ, ಸುಸಜ್ಜಿತ ರಸ್ತೆ ಹಾಗೂ ಇತರ ಮೂಲಸೌಕರ್ಯಗಳನ್ನು ಕಲ್ಪಿಸಲು ಕಳೆದ ಐದು ವರ್ಷಗಳಲ್ಲಿ ಶ್ರಮಿಸಲಾಗಿದೆ. ಅಭಿವೃದ್ಧಿ ಕಾರ್ಯಗಳಿಗೆ ವಾರ್ಡ್ ನಿವಾಸಿಗಳು ಸಹಕಾರ ನೀಡಿದ್ದಾರೆ' ಎಂದು ತಿಳಿಸಿದರು.

## ಸಿಂಧನೂರಿನ ಕಾರುಣ್ಯಾಶ್ರಮದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಅವರಿಗೆ ಬಸವ ಪುರಸ್ಕಾರ ಪ್ರಶಸ್ತಿ ಪ್ರಧಾನ

ನೈಜ್ಯ ದೆಸೆ ನ್ಯೂಸ್

ಶರಣ ಸೇವಾ ಸಮಿತಿ ಬೆಂಗಳೂರು ಹಾಗೂ ವಸಂತ ಲಕ್ಷ್ಮಿ ಫೌಂಡೇಶನ್ ಬೆಂಗಳೂರು ಇವರುಗಳ ಸಹಯೋಗದಲ್ಲಿ ಸಂಜೆಯ ನಗರದ ಶ್ರೀ ರಮಣ ಮಹರ್ಷಿ ಸಭಾಂಗಣದಲ್ಲಿ ಹಮ್ಮಿಕೊಂಡ ಬಸವ ಜಯಂತಿ ಹಾಗೂ ಸಾಧಕರುಗಳಿಗೆ 2026ನೇ ವರ್ಷದ ಬಸವ ಪುರಸ್ಕಾರ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ನೆರವೇರಲಿದೆ.

ಈ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ ಹಾಗೂ ಸಚಿವರಾದ ಎಚ್. ಕೆ. ಪಾಟೀಲ್ ಮತ್ತು ಬೈರತಿ ಸುರೇಶ ಹಾಗೂ ಕೆ. ಎಚ್. ಮುನಿಯಪ್ಪ ಮತ್ತು ಮಾಜಿ ಮುಖ್ಯಮಂತ್ರಿಗಳಾದ ಡಿ.ವಿ.



ಸದಾನಂದ ಗೌಡ ಇವರುಗಳ ಉಪಸ್ಥಿತಿಯಲ್ಲಿ ನಾಡಿನ ಹರ ಗುರು ಚರಮೂರ್ತಿಗಳ ಗಣ್ಯಾತಿ ಗಣ್ಯರ ಸಮಕ್ಷಮದಲ್ಲಿ ಸಿಂಧನೂ–ರಿನ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಇವರ ಅನೇಕ ಸಮಾಜ ಸೇವೆ ಅನಾಥ ಪರ ಸೇವೆಯನ್ನು ಗುರುತಿಸಿ ಬಸವ ಪುರಸ್ಕಾರ ಪ್ರಶಸ್ತಿ ಪ್ರಧಾನ ಮಾಡಲಾಗುತ್ತದೆ ಎಂದು ಈ ಮೂಲಕ ಪತ್ರಿಕೆಗಳಿಗೆ ಮಾಹಿತಿ ನೀಡಿರುತ್ತಾರೆ.

## ಶಿಡ್ಲಘಟ್ಟ ಪೊಲೀಸರ ಯಶಸ್ವಿ ಕಾರ್ಯಾಚರಣೆ ದ್ವಿಚಕ್ರ ವಾಹನಗಳ ಕಳ್ಳನ ಬಂಧನ.



ನೈಜ್ಯ ದೆಸೆ ನ್ಯೂಸ್

ಶಿಡ್ಲಘಟ್ಟ: ನಗರದಲ್ಲಿ ಸರಣಿ ದ್ವಿಚಕ್ರ ವಾಹನಗಳ ಕಳ್ಳತನ ಮಾಡುತ್ತಿದ್ದ ಆರೋಪಿಯನ್ನು ಬಂಧಿಸುವಲ್ಲಿ ಶಿಡ್ಲಘಟ್ಟ ನಗರ ಪೊಲೀಸರು ಯಶಸ್ವಿಯಾಗಿದ್ದಾರೆ. ಬಂಧಿತನಿಂದ ಸುಮಾರು ಐದು ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಘಟನೆಯ ಹಿನ್ನೆಲೆ: ದಿನಾಂಕ 05/12/2026 ರಂದು ದೂರುದಾರರಾದ ಇನಾಯತ್ ಬಿನ್ ಲೇಟ್ ಶೇಕ್ ಫರಾನ್ ಸಾಬ್ ಅವರು ಶಿಡ್ಲಘಟ್ಟದ ಸರ್ಕಾರಿ ಆಸ್ಪತ್ರೆಯ ಬಳಿ ನಿಲ್ಲಿಸಿದ್ದ ತಮ್ಮ ಪ್ಯಾಷನ್ ಪ್ರೋ ದ್ವಿಚಕ್ರ ವಾಹನ (ಏಂ 40-S-0832) ಕಳ್ಳತನವಾಗಿರುವ ಬಗ್ಗೆ ದೂರು ನೀಡಿದ್ದರು. ಈ ಸಂಬಂಧ ಶಿಡ್ಲಘಟ್ಟ ನಗರ ಪೊಲೀಸ್

**ಪೊಲೀಸರು ಆರೋಪಿಯಿಂದ ಐದು ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ:**

- KA 40-S-0832
- KA 40-EW-2930
- KA 07-R-9622
- KA 03-HJ-8822
- ನೋಂದಣಿ ಸಂಖ್ಯೆ ಇಲ್ಲದ ಹಿರೋಹೋಂಡಾ ಸ್ಪ್ಲೆಂಡರ್

ಠಾಣೆಯಲ್ಲಿ ಮೊ.ಸಂಖ್ಯೆ: 57/2026, ಕಲಂ: 303(2) ಬಿ.ಎನ್.ಎಸ್ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು. ಬಂಧಿತ ಆರೋಪಿಯನ್ನು ಕೋಲಾರ ಜಿಲ್ಲೆಯ ಶ್ರೀನಿವಾಸಪುರ ನಗರದ ಜಾಕೀರ್ ಹುಸೇನ್ ಮೊಹಲ್ಲಾ ನಿವಾಸಿ ಸೈಯದ್ ಯಾಸಿನ್ ಪಾಷ (29) ಎಂದು ಗುರುತಿಸಲಾಗಿದೆ.

ಈತ ಸದ್ಯ ಶಿಡ್ಲಘಟ್ಟದ ದರ್ಗಾ ಮೊಹಲ್ಲಾದಲ್ಲಿ ವಾಸವಾಗಿದ್ದು, ಖಾಸಗಿ ಬಸ್ ಕಂಡಕ್ಟರ್ ಹಾಗೂ ಕೂಲಿ ಕೆಲಸ ಮಾಡುತ್ತಿದ್ದ ಎನ್ನಲಾಗಿದೆ. ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಕುಶಾಲ್ ಚೌಕ್ಸೆ, ಅವರು ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಜಗನ್ನಾಥ್ ರೈ ಹಾಗೂ ಚಿಂತಾಮಣಿ ಉಪವಿಭಾಗದ ಡಿವೈಎಸ್ಪಿ ಮುರಳೀಧರ್ ಅವರ ಮಾರ್ಗದರ್ಶನದಲ್ಲಿ ಈ ಕಾರ್ಯಾಚರಣೆ ನಡೆದಿದೆ.

ಶಿಡ್ಲಘಟ್ಟ ವೃತ್ತದ ಸರ್ಕಲ್ ಇನ್ಸ್‌ಪೆಕ್ಟರ್ ಆನಂದ್ ಕುಮಾರ್ ಜಿ.ಎನ್, ನಗರ ಠಾಣೆಯ ಪಿ.ಎಸ್.ಐ ವೇಣುಗೋಪಾಲ್ ಎಂ, ಮತ್ತು ಅಪರಾಧ ವಿಭಾಗದ ಸಿಬ್ಬಂದಿಗಳಾದ ಜಗದೀಶ್ (ಸಿ.ಹೆಚ್.ಸಿ 41), ನಾರಾಯಣಸ್ವಾಮಿ (ಸಿ.ಹೆಚ್.ಸಿ 52), ಸಂಪತ್ತು, ನಂದೀಶ್, ಕೆಂಪರಾಜು ಮತ್ತು ನಟೇಶ್ ಅವರನ್ನೊಳಗೊಂಡ ತಂಡ ಯಶಸ್ವಿ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ. ಪೊಲೀಸ್ ತಂಡದ ಈ ಕಾರ್ಯಕ್ಷಮತೆಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಶ್ಲಾಘಿ–ಸಿದ್ದಾರೆ. ಪೊಲೀಸ್ ಇಲಾಖೆಯಿಂದ ಈ ಕು–ರಿತು ಪತ್ರಿಕಾ ಪ್ರಕಟಣೆ ಹೊರಡಿಸಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.


## ಜಿಲ್ಲಾಡಳಿತದಿಂದ ಮೇ.10ರಂದು ಹೇಮರಡ್ಡಿ ಮಲ್ಲಮ್ಮ ಜಯಂತಿ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹೇಮರಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮೇ.10ರ ಬೆಳಿಗ್ಗೆ 10:30ಕ್ಕೆ ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ,

ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ



ಮಹಾಸಾಧ್ವಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ

ಚಂದ್ರಶೇಖರ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ,

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಸಿದ್ಧಾರ್ಥ ಬುದ್ಧ ವಿಹಾರ ಸಮಿತಿಯ ಅಧ್ಯಕ್ಷ ಆರ್.ರವಿಕುಮಾರ ರಾಂಪೂರು, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್,

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ. ಶ್ರೀ ಡಾ. ಬಸವಗೌಡ ಪಿ.ಪಾಟೀಲ್ ಜಿಲ್ಲಾಧ್ಯಕ್ಷರು ಹೇಮರಡ್ಡಿ ಸಮಾಜ ರಾಯಚೂರು ಶ್ರೀ ರಿತೇಶ ಕುಮಾರ ಸಿಂಗ್ ಸನ್ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಬೆಂಗಳೂರು ಹಾಗೂ ರಾಯಚೂರು ಜಿಲ್ಲೆಯ ಉಸ್ತುವಾರಿ ಕಾರ್ಯದರ್ಶಿಗಳು, ವಿಶೇಷ ಆಹ್ವಾನಿತರು, ಶ್ರೀ ರಾಮುನಗೌಡ ಏಗನೂರು ತಾಲೂಕ್ ಹೇಮರಡ್ಡಿ ಸಮಾಜ ರಾಯಚೂರು ಶ್ರೀ ಶರಣಪ್ಪ ನಿವೃತ್ ಪ್ರಾಂಶುಪಾಲರು ಲಿಂಗಸೂಗೂರು ಇವರು ಹೇಮರಡ್ಡಿ ಮಲ್ಲಮ್ಮ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಮಕಾತಿ ಪ್ರಕಟಣೆ

NTPC ನೇಮಕಾತಿ 2026–20 ಸಹಾಯಕ ಅಧಿಕಾರಿ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಮೇ 8, 2026 NTPC ನೇಮಕಾತಿ 2026: 20 ಸಹಾಯಕ ಅಧಿಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ನ್ಯಾಷನಲ್ ಥರ್ಮಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಮೇ 2026 ರ NTPC ಅಧಿಕೃತ ಅಧಿಸೂಚನೆಯ ಮೂಲಕ ಸಹಾಯಕ ಅಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ದೆಹಲಿ ನವದೆಹಲಿ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 22–ಮೇ–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 08–05–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 22–ಮೇ–2026 ಅಧಿಕೃತ ವೆಬ್‌ಸೈಟ್: ntpc.co.in

## ಕನ್ನಡ ವಿಷಯದಲ್ಲಿ ಶತಪ್ರತಿಶತ ಅಂಕ ಪಡೆದ ವಿದ್ಯಾರ್ಥಿನಿಗೆ ಸನ್ಮಾನ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಜಿಲ್ಲೆಯ ಗಿಲ್ಲೇಸುಗೂರು ಸರಕಾರಿ ಪ್ರೌಢಶಾಲೆಯಲ್ಲಿ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ ನೂರಕ್ಕೆ ನೂರು ಅಂಕ ಪಡೆದ ಕುಮಾರಿ ನಿವೇದಿತಾ ಅವರನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ಪರಿಷತ್ತಿನ ವತಿಯಿಂದ ಗೌರವಿಸಿ ಸತ್ಕರಿಸಲಾಯಿತು.**





ಇದೇ ಸಂದರ್ಭದಲ್ಲಿ ಶಾಲೆಯ ಟಾಪರ್ ವಿದ್ಯಾರ್ಥಿನಿಯಾದ ಕುಮಾರಿ ತಬಸುಮ್ ಅವರಿಗೆ ಅನುಪಸ್ಥಿತಿಯಲ್ಲಿ ಗೌರವ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಪೂಜ್ಯ ಕಿಲ್ಲೆ ಮಠದ ಶ್ರೀಗಳು, ಈರಣ್ಣ ಕೋಸಗಿ, ಬಿಇಒ ಮೋಹಿನಿ ಹುಲ್ಲಕ್, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರು ಲಕ್ಷ್ಮಿ, ಮುಖ್ಯ ಗುರುಗಳು ವೆಂಕಟೇಶ್ ನವಲಿ, ಶಿಕ್ಷಕರು, ಕನ್ನಡ ಸಾಹಿತ್ಯ ಪರಿಷತ್ತಿನ ಎಲ್ಲಾ ಪದಾಧಿಕಾರಿಗಳು, ಪಾಲಕರು, ಕುಟುಂಬ ವರ್ಗದವರು ಸೇರಿದಂತೆ ಅನೇಕ ಗಣ್ಯರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಕಸಾಪ ಸಂಸ್ಥಾಪನಾ ದಿನ ಆಚರಣೆ

**ನೈಜ್ಯ ದೆಸೆ ನ್ಯೂಸ್**

**ತಾಳಿಕೋಟಿ: ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನವನ್ನು ಶುಕ್ರವಾರ ಪರಿಷತ್ತಿನ ಕಾರ್ಯಾಲಯದಲ್ಲಿ ಆಚರಿಸಲಾಯಿತು. ಕಾರ್ಯಕ್ರಮವನ್ನು ವಿಶ್ರಾಂತ್ ಲೆಕ್ಕ ಪರಿಶೋಧಕ ಹಾಗೂ ಸಾಹಿತಿ ಸಿದ್ದಣ್ಣ ದೇಸಾಯಿ ಉದ್ಘಾಟಿಸಿದರು. ಕನ್ನಡ ಸಾಹಿತ್ಯ ಪರಿಷತ್ ನಗರ ಘಟಕದ ಅಧ್ಯಕ್ಷ ಆರ್ ಎಲ್ ಕೊಪ್ಪದ ಅಧ್ಯಕ್ಷತೆ ವಹಿಸಿದ್ದರು.**



ಮುಖ್ಯ ಅತಿಥಿಗಳಾಗಿ ಕಸಾಪ ಗೌರವ ಕೋಶಾಧ್ಯಕ್ಷ ರಾಜು ಹಂಚಾಟೆ, ಪದಾಧಿಕಾರಿ ಬಿಆರ್ ಪೊಲೀಸ್ ಪಾಟೀಲ, ವಿಶ್ರಾಂತ ಶಿಕ್ಷಕಿ ಬಿ ಟಿ ಸಜ್ಜನ, ಸಂಘಟನಾ ಸಂಚಾಲಕ ಜೈ ಭೀಮ ಮುತ್ತಗಿ ಆಗಮಿಸಿದ್ದರು. ದತ್ತಿ ಸಂಚಾಲಕ ಆರ್. ಬಿ.ದಾನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಸಾಹಿತಿ ಸಿದ್ದಣ್ಣ ದೇಸಾಯಿ ಅವರನ್ನು ಪರಿಷತ್ತಿನ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸದಸ್ಯರಾದ ಅಬೂಬಕರ ಲಾಹೋರಿ,ನಬಿ ಲಾಹೋರಿ ಮತ್ತಿತರರು ಉಪಸ್ಥಿತರಿದ್ದರು.

# ಉಪಾಧ್ಯಕ್ಷರಾಗಿ ಸಕೀನಾಬಿ ಲಾಹೋರಿ ಅವಿರೋಧವಾಗಿ ಆಯ್ಕೆ

**ನೈಜ್ಯ ದೆಸೆ ನ್ಯೂಸ್**

**ತಾಳಿಕೋಟಿ: ಪಟ್ಟಣದ ದಿ. ಮುಸ್ಲಿಂ ಕೋ–ಆಪರೇಟಿವ ಬ್ಯಾಂಕ್ ಲಿಮಿಟೆಡ್ ಇದರ ತೆರವಾದ ಉಪಾಧ್ಯಕ್ಷ ಸ್ಥಾನಕ್ಕೆ ಶುಕ್ರವಾರ ನಡೆದ ಚುನಾವಣೆಯಲ್ಲಿ ನಿರ್ದೇಶಕಿ ಸಕೀನಾಬಿ ಚಂದಸಾಬ ಲಾಹೋರಿ ಅವಿರೋಧವಾಗಿ ಆಯ್ಕೆಯಾದರು. ಉಪಾಧ್ಯಕ್ಷ ಸ್ಥಾನಕ್ಕೆ ಸಕೀನಾಬಿ ಚಂದಸಾಬ ಲಾಹೋರಿ ಅವರೊಬ್ಬರೇ ನಾಮಪತ್ರ ಸಲ್ಲಿಸಿದ್ದರು.**

**ಬೇರೆ ಯಾರೂ ನಾಮಪತ್ರ ಸಲ್ಲಿಸದೇ ಇರುವುದರಿಂದ ಚುನಾವಣಾ ಅಧಿಕಾರಿ ವಿಜಯಕುಮಾರ ಉತ್ನಾಳ ಅವರು ಸಕೀನಾಬಿ ಲಾಹೋರಿ ಅವಿರೋಧ ಆಯ್ಕೆ ಆಗಿರುವುದನ್ನು ಘೋಷಿಸಿದರು. ಒಟ್ಟು 13 ನಿರ್ದೇಶಕರನ್ನು ಹೊಂದಿರುವ ಬ್ಯಾಂಕಿನ ಉಪಾಧ್ಯಕ್ಷರ ಈ ಚುನಾವಣೆಯಲ್ಲಿ 12 ಜನ ನಿರ್ದೇಶಕರು ಹಾಜರಿದ್ದು ಒಬ್ಬ ನಿರ್ದೇಶಕ ಗೈರಾಗಿದ್ದರು. ಬ್ಯಾಂಕಿನ ವ್ಯವಸ್ಥಾಪಕ ಎಲ್.ಆರ್.ನಾಗೂರ ಸಹಾಯಕರಾಗಿ ಕಾರ್ಯ ನಿರ್ವಹಿಸಿದರು.**





ವಿಜಯೋತ್ಸವ: ಸಕೀನಾಬಿ ಲಾಹೋರಿ ಉಪಾಧ್ಯಕ್ಷರಾಗಿ ಆಯ್ಕೆ ಆಗುತ್ತಿದ್ದಂತೆಯೇ ಅವರ ಅಪಾರ ಬೆಂಬಲಿಗರು ಪಟಾಕಿ ಸಿಡಿಸಿ ಸಿಹಿ ವಿತರಿಸಿ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಬ್ಯಾಂಕಿನ ಅಧ್ಯಕ್ಷ ಮಹೆಬೂಬ ಕೆಂಭಾವಿ ಮಾತನಾಡಿ ನಮ್ಮ ಪೆನಲ್ ನವರಾದ ಸಕೀನಾಬಿ ಲಾಹೋರಿ ಇವರನ್ನು ಅವಿರೋಧವಾಗಿ ಆಯ್ಕೆ ಮಾಡಿದ್ದೇವೆ ಎಲ್ಲರೂ ಒಂದಾಗಿ ಬ್ಯಾಂಕಿನ ಅಭಿವೃದ್ಧಿಗಾಗಿ ಕೆಲಸ ಮಾಡುತ್ತೇವೆ ಎಂದರು. ನಿರ್ದೇಶಕ ಇಬ್ರಾಹಿಂ ಮನ್ಸೂರ ಮಾತನಾಡಿ ಎಲ್ಲ ನಿರ್ದೇಶಕರ ಸರ್ವಾನುಮತದಿಂದ ಲಾಹೋರಿ ಅವರ ಅವಿರೋಧ ಆಯ್ಕೆ ಮಾಡಲಾಗಿದೆ ಅವರಿಗೆ ಎಲ್ಲ ರೀತಿಯಿಂದಲೂ ಸಹಕಾರ ನೀಡಲಾಗುವುದು ಎಂದರು.

ನಿರ್ದೇಶಕರಾದ ಚಂದಾಹುಸೇನ ಖಾಂಜಾದೆ,ರಫೀಕ ಬೇಪಾರಿ, ಮಹಮ್ಮದ್ ಇಸ್ಮಾಯಿಲ (ತನ್ವೀರ) ಮನಗೂಳಿ,ದಾದೇಪೀರ ಚೌದ್ರಿ, ಮುರ್ತುಜಾ(ಮುನ್ನಾ) ಅರ್ಜುಣಗಿ, ಮಹಮ್ಮದ್ ಆದಾಮ ಅತ್ತಾರ, ಸಿಕಂದರಬಾಶಾ ಡೋಣಿ, ಮೊಹಮ್ಮದ್ ಶಫೀಕ ಇನಾಮದಾರ, ಮಾಜಾನಬಿ ಚೆನ್ನೂರ, ಮುಖಂಡರಾದ ಮಾಸೂಮಸಾಬ ಕೆಂಭಾವಿ,ಖಾಜಾಹುಸೇನ ಸಗರ, ಹಸನಸಾಬ ಮನಗೂಳಿ,ಜೈಭೀಮ ಮುತ್ತಗಿ,ಬಾಬಾ ಮನಗೂಳಿ(ವಿಜಾಪುರ), ಹೈದರಶಾ ಮಕಾನದಾರ,ಶಬ್ಬೀರ ಲಾಹೋರಿ, ಹುಸೇನ ಲಾಹೋರಿ, ಬುಡ್ಡಾ ಎಕೀನ, ಅಬೂಬಕರ ಲಾಹೋರಿ,ನಬಿ ಲಾಹೋರಿ, ಉಸ್ಮಾನ ಲಾಹೋರಿ,ಜಾಕೀರ ಲಾಹೋರಿ, ಮೆಹೆಬೂಬ ಲಾಹೋರಿ, ರಸೂಲ ಶಾಪೂರಿ, ಯೂಸೂಫ ನಾಡಗೌಡ ಮತ್ತಿತರರು ಇದ್ದರು.

# ಸುರಕ್ಷಿತ ತಾಯಿತನಕ್ಕೆ ತಾಯಿ ಮತ್ತು ಮಕ್ಕಳ ನಡುವಿನ ಅಂತರದ ಹೆರಿಗೆ ವಿಧಾನಗಳನ್ನು ಅಳವಡಿಸಿಕೊಳ್ಳಿ :ಬಸ್ಸಯ್ಯ ಉ ಜಿ ಆ ಶಿಕ್ಷಣಾಧಿಕಾರಿ



**ನೈಜ್ಯ ದೆಸೆ ನ್ಯೂಸ್**

ಸಿಂಧನೂರು: ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ತಾಯಿಂದಿರಿಗೆ. ಅಂತರ ಹೆರಿಗೆ ವಿಧಾನಗಳು ಮಾಹಿತಿ ನೀಡುವ ಕಾರ್ಯಕ್ರಮವನ್ನು ಅಂಗನವಾಡಿ ಕೇಂದ್ರದಲ್ಲಿ. ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಕುರಿತು ಮಾತನಾಡಿದ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸ್ಸಯ್ಯ ಅವರು ಕುಟುಂಬ ಯೋಜನೆ ಅಳವಡಿಸಿ ಕೊಳ್ಳಲು ದಂಪತಿಗಳು ತಮಗೆ ಬೇಕಾದ ಸಮಯದಲ್ಲಿ ಮಕ್ಕಳನ್ನು ಪಡೆಯಲು ತಾತ್ಕಾಲಿಕ ಮತ್ತು ಶಾಶ್ವತ ವಿಧಾನಗಳನ್ನು ಆಯ್ಕೆ ಮಾಡಿಕೊಳ್ಳಬಹುದು ತಾತ್ಕಾಲಿಕ ವಿಧಾನಳಾದ ಪ್ರತಿ ದಿನ ನುಂಗುವ ಗರ್ಭ ನಿರೋಧಕ ಮಾತ್ರೆಗಳು . ತಾಮ್ರದ ಐಯುಡಿ ಅಂತರ ಚಿಕಿತ್ಸೆ ಪಡೆಯುವ ಮೂಲಕ ಮಕ್ಕಳ ನಡುವಿನ ಅಂತರ ಕಾಪಾಡಿಕೊಂಡು ತಾಯಿಂದಿರು ಆರೋಗ್ಯವಾಗಿರ ಬಹುದು ಒಟ್ಟಾರೆ ತಾಯಿಯ ಆರೋಗ್ಯಕ್ಕೆ ಮಕ್ಕಳ ನಡುವೆ ಅಂತರ ಕಾಪಾಡಲು ತಾತ್ಕಾಲಿಕ ವಿಧಾನಗಳನ್ನು ಅಳವಡಿಸಿಕೊಂಡು ತಾಯಿಯ ಆರೋಗ್ಯ ಉತ್ತಮವಾಗಿರುತ್ತದೆ.

ಕುಟುಂಬ ಕಲ್ಯಾಣ ಯೋಜನೆಯ ತಾಯಿ ಮಕ್ಕಳ ಆರೋಗ್ಯದ ಸುಧಾರಣೆಗಾಗಿ ಹಾಗೂ ಬೇಡವಾದ ಗರ್ಭಧಾರಣೆಯನ್ನು ತಡೆಗಟ್ಟುವುದು ಮಕ್ಕಳಲ್ಲಿ ಅಂತರವನ್ನು ಕಾಪಾಡಿಕೊಳ್ಳುವುದು ಕುಟುಂಬ ಕಲ್ಯಾಣ ಯೋಜನೆಯ ಮಹತ್ವದ ಉದ್ದೇಶವಾಗಿದೆ ಎಂದರು. ನಂತರ ಮಾತನಾಡಿದ ರಾಘವೇಂದ್ರ ಲಸಿಕಾ ಮೇಲ್ವಿಚಾರಕರು ಅವರು ಮಾತನಾಡಿ ಅವರು ತಮ್ಮ ಮಕ್ಕಳ ಆರೋಗ್ಯಕ್ಕಾಗಿ ಸಮಯಕ್ಕೆ ಸರಿಯಾಗಿ ಎಲ್ಲಾ ಲಸಿಕೆಯನ್ನು ಕೊಡಿಸಬೇಕು ಬಾಲ್ಯಾವಸ್ಥೆಯಲ್ಲಿ ಬರಬಹುದಾದ ಖಾಯಿಲೆಗಳನ್ನು ತಡೆಯಬಹುದಾಗಿದೆ ಇದರಿಂದ ಮಕ್ಕಳ ಆರೋಗ್ಯ ಉತ್ತಮವಾಗಿರುತ್ತದೆ.

ಮಕ್ಕಳ ನಡುವೆ ಅಂತರವನ್ನು ಕಾಪಾಡಿಕೊಳ್ಳಲು ತಾತ್ಕಾಲಿಕ ವಿಧಾನಗಳಾದ ಐಯುಡಿ. ನುಂಗುವ ಮಾತ್ರೆ.ಛಾಯ ಮಾತ್ರೆಗಳು ಹಾಗೂ ಅಂತರ ಚುಚ್ಚುಮದ್ದನ್ನು ಪಡೆದುಕೊಳ್ಳುವ ಮೂಲಕ ಮಕ್ಕಳ ನಡುವೆ ಅಂತರವನ್ನು ಕಾಪಾಡಿಕೊಂಡು ಆರೋಗ್ಯವಾಗಿರಬಹುದಾಗಿದೆ ಎಂದರು. ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳಾದ ನಿಂಗಮ್ಮ ಮತ್ತು ರಾಧಾ ಆಶಾ ಕಾರ್ಯಕರ್ತೆಯರಾದ ಸುಜಾತಾ. ನೂರಾಜಾ ಬೇಗಂ ಹಾಗೂ ಮಕ್ಕಳ ತಾಯಿಂದಿರು ಉಪಸ್ಥಿತರಿದ್ದರು.

## ಸರ್ಕಾರಿ ಕಚೇರಿಗಳಲ್ಲಿ ಸಮಯ ಪಾಲನೆ ಮಾಡದ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಮೋಹನ್ ಗೊಸ್ಲೆ ಆಗ್ರಹ

**ನೈಜ್ಯ ದೆಸೆ ನ್ಯೂಸ್**

**ಲಿಂಗಸಗೂರು: ತಾಲ್ಲೂಕಿನ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ನಿಗದಿತ ಸಮಯಕ್ಕೆ ಕಚೇರಿಗೆ ಹಾಜರಾಗದೆ ಸಾರ್ವಜನಿಕರನ್ನು ಅಲೆದಾಡಿಸುತ್ತಿರುವ ಘಟನೆಗಳು ಖಂಡನೀಯವಾಗಿದ್ದು, ಈ ಬಗ್ಗೆ ಸಹಾಯಕ ಆಯುಕ್ತರು ಕೂಡಲೇ ಮಧ್ಯಪ್ರವೇಶಿಸಿ ಕ್ರಮ ಕೈಗೊಳ್ಳಬೇಕು ಪ್ರಸ್ತುತ ಬೇಸಿಗೆಯ ಹಿನ್ನೆಲೆಯಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಸರ್ಕಾರವು ಬೆಳಿಗ್ಗೆ 8:00 ಗಂಟೆಯಿಂದ ಕಚೇರಿ ಅವಧಿಯನ್ನು ನಿಗದಿಪಡಿಸಿದೆ.**

ಆದರೆ ಉಪನೋಂದಣಿ ಅಧಿಕಾರಿಗಳ ಕಚೇರಿ (Sub-Registrar Office) ಮತ್ತು ಪಿ.ಎಲ್.ಡಿ (PLD) ಬ್ಯಾಂಕ್ ಸೇರಿದಂತೆ ಹಲವು ಇಲಾಖೆಗಳಲ್ಲಿ ಬೆಳಿಗ್ಗೆ 9:00 ಗಂಟೆಯಾದರೂ ಸಿಬ್ಬಂದಿಗಳು ಕಚೇರಿಗೆ ಹಾಜರಾಗುತ್ತಿಲ್ಲ. ದೂರದ ಹಳ್ಳಿಗಳಿಂದ ಬರುವ ರೈತರು ಮತ್ತು ಸಾರ್ವಜನಿಕರು ಬಿಸಿಲು ಹೆಚ್ಚಾಗುವುದರೊಳಗೆ ತಮ್ಮ ಕೆಲಸ ಮುಗಿಸಿಕೊಳ್ಳಲು ಕಚೇರಿಗಳ ಮುಂದೆ ಕಾಯುತ್ತಿದ್ದರೆ ಇತ್ತ ಸಿಬ್ಬಂದಿಗಳು ಮಾತ್ರ ಕರ್ತವ್ಯದ ಬಗ್ಗೆ ಕಿಂಚಿತ್ತೂ ಕಾಳಜಿ ವಹಿಸುತ್ತಿಲ್ಲ. ಕೆಲವು ಸಿಬ್ಬಂದಿಗಳಿಗೆ ದೂರವಾಣಿ ಕರೆ ಮಾಡಿ ವಿಚಾರಿಸಿದರೆ ಉಡಾಫೆಯ ಮತ್ತು ಬೇಜವಾಬ್ದಾರಿತನದಿಂದ ಉತ್ತರಿಸುತ್ತಿದ್ದಾರೆ.



ಸಾರ್ವಜನಿಕರ ಸೇವೆಗಾಗಿ ಇರುವ ಇಲಾಖೆಗಳು ಈ ರೀತಿ ವಿಳಂಬ ಧೋರಣೆ ಅನುಸರಿಸುತ್ತಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಪ್ರಮುಖ ಬೇಡಿಕೆಗಳು: ಸಹಾಯಕ ಆಯುಕ್ತರು ಕೂಡಲೇ ಬೆಳಿಗ್ಗೆ 8:00 ಗಂಟೆಗೆ ಕಚೇರಿಗಳಿಗೆ ದಿಢೀರ್ ಭೇಟಿ ನೀಡಿ ಹಾಜರಾತಿ ಪರಿಶೀಲಿಸಬೇಕು. ಸಮಯಕ್ಕೆ ಸರಿಯಾಗಿ ಬಾರದ ಮತ್ತು ಸಾರ್ವಜನಿಕರೊಂದಿಗೆ ಅಸಭ್ಯವಾಗಿ ವರ್ತಿಸುವ ಸಿಬ್ಬಂದಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಬೇಕು. ಸರ್ಕಾರದ ಆದೇಶದಂತೆ ಬೇಸಿಗೆಯ ಅವಧಿಯಲ್ಲಿ ಕಟ್ಟುನಿಟ್ಟಾಗಿ ಬೆಳಿಗ್ಗೆ 8:00 ರಿಂದಲೇ ಸೇವೆ ಲಭ್ಯವಿರುವಂತೆ ನೋಡಿಕೊಳ್ಳಬೇಕು.

ಸರ್ಕಾರಿ ಸಿಬ್ಬಂದಿಗಳು ಜನರ ಸೇವಕರಾಗಿದ್ದು, ಅವರ ತೆರಿಗೆ ಹಣದಲ್ಲಿ ಸಂಬಳ ಪಡೆಯುತ್ತಿದ್ದಾರೆ ಎಂಬ ಪ್ರಜ್ಞೆ ಇರಬೇಕು. ಈ ಕೂಡಲೇ ವ್ಯವಸ್ಥೆ ಸುಧಾರಿಸದಿದ್ದರೆ ಮುಂದಿನ ದಿನಗಳಲ್ಲಿ ಕಚೇರಿಗಳ ಮುಂದೆ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಮೋಹನ್ ಗೋಸ್ಲೆ ಕರಡಕಲ್ ನಾಮ ನಿರ್ದೇಶಿತ ಸದಸ್ಯರು, ಎಸ್‌ಸಿ ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆ ಉಸ್ತುವಾರಿ ಸಮಿತಿ (ಲಿಂಗಸಗೂರು, ಮಸ್ಕಿ ಮತ್ತು ಸಿಂಧನೂರು) ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಂಪನಗೌಡ ಬಾದರ್ಲಿಯವರಿಗೆ ಸಚಿವ ಸ್ಥಾನ ಕೊಡದಿದ್ದರೆ ಬೆಂಗಳೂರಿಗೆ ಪಾದಯಾತ್ರೆ: ಶರಣಪ್ಪ ರಡ್ಡೇರ

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ಕ್ಷೇತ್ರದಲ್ಲಿ ಈಗಾಗಲೇ ಐದು ಬಾರಿ ಗೆದ್ದು ಜಿಲ್ಲೆಯ ಹಿರಿಯ ಶಾಸಕರಾಗಿರುವ ಹಂಪನಗೌಡ ಬಾದರ್ಲಿಯವರಿಗೆ ಸಚಿವ ಸ್ಥಾನ ಕೊಡಲೇಬೇಕು ಇಲ್ಲದಿದ್ದಲ್ಲಿ ಸಿಂಧನೂರಿನಿಂದ ಬೆಂಗಳೂರಿನವರೆಗೂ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗುತ್ತದೆ ಎಂದು ಸಿಂಧನೂರು ಟಿಎಪಿಸಿಎಂ–ಎಸ್ ಅಧ್ಯಕ್ಷ ಶರಣಪ್ಪ ರಡ್ಡೆರ್ ತಿಳಿಸಿದರು.**

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು ಅವರು, ಹಿರಿತನ ಹಾಗೂ ಹೆಚ್ಚಿನ ಅನುಭವ ಹೊಂದಿರುವ ಅವರು ಕಾಂಗ್ರೆಸ್ ಪಕ್ಷದ ಕಟ್ಟಾಳು,




ಚುನಾವಣೆಯಲ್ಲಿ ಗೆದ್ದರೂ ಸೋತರು ಕಾಂಗ್ರೆಸ್ ಪಕ್ಷಕ್ಕೆ ಕಟುಬದ್ದರಾಗಿದ್ದಾರೆ. ಈ ಕಾರಣಕ್ಕಾಗಿ ಸಚಿವ ಸ್ಥಾನ ಕೊಡುವಂತೆ ಮನವಿ ಮಾಡಿದರು. ಭೋವಿ ಹಾಗೂ ಮಾದಿಗ ಸಮಾಜದಿಂದ ಬಸನಗೌಡ ಬಾದರ್ಲಿ ಹಾಗೂ ಹಂಪನಗೌಡ ಬಾದರ್ಲಿ ಇಬ್ಬರಿಗೂ ಸಚಿವ ಸ್ಥಾನ ಕೊಡುವಂತೆ ಪ್ರತ್ಯೇಕವಾಗಿ ಒತ್ತಾಯಿಸಿ ಪತ್ರಿಕಾಗೋಷ್ಠಿಗಳನ್ನು ನಡೆಸಿದ್ದಾರೆ.

ನಾಳೆಯೇ ಕೆಲವೊಂದು ಸೊಸೈಟಿ ಅಧ್ಯಕ್ಷರು, ನಿರ್ದೇಶಕರುಗಳ ಎಮ್.ಎಲ್.ಸಿಯವರಿಗೆ ಸಚಿವ ಸ್ಥಾನಕ್ಕೆ ಆಗ್ರಹಿಸಬಹುದು. ಇದರ ಗೊಂದಲ ನಿವಾರಣೆ ಯಾವಾಗ ಎಂಬ ಪತ್ರಕರ್ತರ ಪ್ರಶ್ನೆಗೆ ಅವರವರ ಕಾರ್ಯಕರ್ತರು, ಅಭಿಮಾನಿಗಳು ತಮ್ಮ ನೆಚ್ಚಿನ ನಾಯಕರು ಸಚಿವರಾಗಲಿ ಎಂದು ಬಯಸುವುದು ತಪ್ಪಲ್ಲ ಎಂದು ಉತ್ತರಿಸಿದರು. ಈ ಸಂದರ್ಭದಲ್ಲಿ: ಮಲ್ಲಾಪುರ ಸೊಸೈಟಿ ಅಧ್ಯಕ್ಷ ಬಸವರಾಜ ನಿಟ್ಟೂರು, ಬಾದರ್ಲಿ ಸೊಸೈಟಿ ಅಧ್ಯಕ್ಷ ಬಸವರಾಜ, ಬೊಮ್ಮನಾಳ ಸೊಸೈಟಿ ಅಧ್ಯಕ್ಷ ಅಮರೇಗೌಡ, ಗೋರೆಬಾಳ ಸೊಸೈಟಿ ಅಧ್ಯಕ್ಷ ಬಸನಗೌಡ ಹಾಗೂ ಕಾಂಗ್ರೆಸ್ ಮುಖಂಡ ಮಲ್ಲಿಕಾರ್ಜುನಗೌಡ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಪಟ್ಟಣದಲ್ಲಿ 70 ಕೋಟಿ ವೆಚ್ಚದಲ್ಲಿ ಶಾಶ್ವತ ಕುಡಿಯುವ ನೀರಿನ ಕಾಮಗಾರಿ :ಅಬ್ದೂಲ್ ಗಾಫೂರ್ ಸಾಬ್

**ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ಪಟ್ಟಣದ ಭಾರತ ಜೋಡೊ ಭವನದಲ್ಲಿ ನಗರಯೋಜನಪ್ರಾಧಿಕಾರ ಅಧ್ಯಕ್ಷರು ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದೂಲ್ ಗಾಫೂರ್ ಸಾಬ್ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ ಪಟ್ಟಣದಲ್ಲಿ ಬೇಸಿಗೆ ಅಂಗವಾಗಿ ಪಟ್ಟಣದ 27 ವಾರ್ಡಗಳಲ್ಲಿನ ಜನರಿಗೆ ಅಗತ್ಯವಿರುವ ಕುಡಿಯುವ ನೀರಿನ ಪೂರೈಕೆಗಾಗಿ ಪುರಸಭೆಯಿಂದ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಅಗತ್ಯ ಇರುವ ಕಡೆ ಟ್ಯಾಂಕರ್ ಮೂಲಕ ಕೂಡ ನೀರು ಪೂರೈಕೆ ಮಾಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ.**



ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಹಾಗೂ ಶಾಸಕ ಹಂಪಯ್ಯನಾಯಕ ರವರು ಮಾನ್ವಿ ಪಟ್ಟಣಕ್ಕೆ ಶಾಶ್ವತ ಕುಡಿಯುವ ನೀರಿಗಾಗಿ 70 ಕೋಟಿ ವೆಚ್ಚದಲ್ಲಿ ಅಮೃತ –2 ಯೋಜನೆಯನ್ನು ಮಂಜೂರು ಮಾಡಿಸಿದು ಕಾಮಗಾರಿ ಕೂಡ ಪ್ರಗತಿಯಲ್ಲಿದು ಪೈಪ್ ಲೈನ್ ಕಾಮಗಾರಿ ವೇಗವಾಗಿ ನಡೆಯುತ್ತಿದೆ. ಎ.ಪಿ.ಎಂ.ಸಿ. ಅವರಣದಲ್ಲಿ 12.5 ಲಕ್ಷ ಲೀ ಸಂಗ್ರಹಣ ಸಾಮಾರ್ಥ್ಯದ ಟ್ಯಾಂಕ್ ಹಾಗೂ ಜಯನಗರದಲ್ಲಿ 7.5 ಲಕ್ಷ ಲೀ ಸಂಗ್ರಹಣ ಸಾಮಾರ್ಥ್ಯದ ಟ್ಯಾಂಕ್ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ರಬ್ಬಣಕಲ್ ಕೆರೆಯಲ್ಲಿ 7.5 ಮೀಟರ್ ನೀರನ್ನು ಸಂಗ್ರಹಿಸಲಾಗಿದೆ. ಕಾತರಕಿ ಜಾಕವೇಲ್‌ನಲ್ಲಿ ಕೂಡ ಯಂತ್ರಗಳನ್ನು ಹಾಕಲಾಗುತ್ತಿದೆ. ಪೈಪ್ ಲೈನ್ ಹಾಗೂ ವಾಲ್‌ಗಳ ದುರಸ್ಥಿ ಕೈಗೊಳ್ಳಲಾಗುತ್ತಿದೆ. ಜುಮ್ಮಲದೊಡ್ಡಿ ಸಿಲ್ವಾರ್ ಜ್ಯೂಬಲಿ ಟ್ಯಾಂಕ್ ನಿಂದ 5 ವಾರ್ಡಗಳಿಗೆ ಸಂಪರ್ಕ ಪೈಪ್ ಲೈನ್ ಹಾಕಲಾಗುತ್ತಿದೆ.

ಪುರಸಭೆಯಿಂದ ಬೇಸಿಗೆಯಲ್ಲಿ ನೀರಿನ ತೊಂದರೆ ಇದ್ದರು ಕೂಡ ವಾರ್ಡಗಳಿಗೆ 5 ದಿನಗಳಿಗೊಮ್ಮೆ ನೀರನ್ನು ಬಿಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಅಮೃತ –2 ಯೋಜನೆ ಪೂರ್ಣಗೊಳಿಸಿ ನಿರಂತರವಾಗಿ ನೀರು ಪೂರೈಕೆಗೆಅಗತ್ಯ ಕ್ರಮ ಕೈಗೊಳ್ಳಲಾಗುವುದು ಅದ್ದರು ಕೂಡ ಕೆಲವರು ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ರವರ ವಿರುದ್ದ ಸಾಮಾಜಿಕ ಜಾಲತಾಣಗಳಲ್ಲಿ ಅಪಪ್ರಚಾರ ಹಾಗೂ ಸುಳ್ಳು ಮಾಹಿತಿಯನ್ನು ನೀಡುವ ಮೂಲಕ ಜನರಲ್ಲಿ ಗೊಂದಲ ಮೂಡಿಸಿತಿದ್ದು ,ಸಚಿವ ಎನ್.ಎಸ್.ಬೋಸರಾಜು ರವರ ಗೌರವಕ್ಕೆದಕ್ಕೆ ತರುವ ಕೆಲಸವನ್ನು ಮಾಡುತ್ತಿದ್ದಾರೆ ಅಂತಹವರ ವಿರುದ್ದ ಕಾನೂನು ತಜ್ಞರ ಜೋತೆ ಸಮಾಲೋಚಿಸಿ ಅಗತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ತಾ.ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಐಟಿಐ ವೆಲ್ಡರ್

ಐಟಿಐ ವೆಲ್ಡರ್ (ITI Welder) ಕೋರ್ಸ್ ಒಂದು ವರ್ಷದ ಅವಧಿಯ ತಾಂತ್ರಿಕ ಕೋರ್ಸ್ ಆಗಿದ್ದು, ಲೋಹಗಳನ್ನು ಜೋಡಿಸುವ (Welding) ಕೌಶಲ್ಯವನ್ನು ಕಲಿಸುತ್ತದೆ. ಇದು NCVT ಅಥವಾ SCVT ಮಾನ್ಯತೆ ಪಡೆದಿದ್ದು, ಕೈಗಾರಿಕೆಗಳಲ್ಲಿ ವೆಲ್ಡರ್ ಆಗಿ ಉದ್ಯೋಗಾವಕಾಶ ನೀಡುತ್ತದೆ. ವೆಲ್ಡರ್ ಕೋರ್ಸ್ ವಿವರಗಳು:ಕೋರ್ಸ್ ಅವಧಿ: 1 ವರ್ಷ (2 ಸೆಮಿಸ್ಟರ್‌ಗಳು).ಅರ್ಹತೆ: 8ನೇ ಅಥವಾ 10ನೇ ತರಗತಿ ಉತ್ತೀರ್ಣರಾಗಿರಬೇಕು (ಸಂಸ್ಥೆಗಳನ್ನು ಅವಲಂಬಿಸಿ). ವಯೋಮಿತಿ: ಸಾಮಾನ್ಯವಾಗಿ 14 ವರ್ಷ ಮೇಲ್ಪಟ್ಟವರು. ಕಲಿಯುವ ವಿಷಯಗಳು: ಗ್ಯಾಸ್ ವೆಲ್ಡಿಂಗ್, ಆರ್ಕ್ ವೆಲ್ಡಿಂಗ್, ಸುರಕ್ಷತಾ ನಿಯಮಗಳು, ಲೋಹಗಳ ಕತ್ತರಿಸುವಿಕೆ (Cutting), ಮತ್ತು ತಾಂತ್ರಿಕ ಚಿತ್ರಣ (Technical Drawing).ಉದ್ಯೋಗಾವಕಾಶಗಳು: ಉತ್ಪಾದನಾ ಘಟಕಗಳು, ವಾಹನ ಉದ್ಯಮ (Automotive), ಹಡಗು ನಿರ್ಮಾಣ, ನಿರ್ಮಾಣ ಕ್ಷೇತ್ರ (Construction), ಮತ್ತು ಸ್ವಯಂ ಉದ್ಯೋಗ.ಪ್ರವೇಶಾತಿ: ಸರ್ಕಾರಿ ಐಟಿಐಗಳಲ್ಲಿ ಕಡಿಮೆ ಶುಲ್ಕಕ್ಕೆ ಮತ್ತು ಖಾಸಗಿ LnLಗಳಲ್ಲಿ ನೇರ ಪ್ರವೇಶ ಪಡೆಯಬಹುದು.ಅಗತ್ಯ ದಾಖಲೆಗಳು: 8ನೇ/10ನೇ ತರಗತಿ ಅಂಕಪಟ್ಟಿಆಧಾರ್ ಕಾರ್ಡ್ಜಾತಿ ಮತ್ತು ಆದಾಯ ಪ್ರಮಾಣಪತ್ರಫೋಟೋಗಳುಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸರ್ಕಾರದ ಐಟಿಐ ಇಲಾಖೆಯ ಅಧಿಕೃತ ವೆಬ್‌ಸೈಟ್ ಅಥವಾ ಹತ್ತಿರದ ಸರ್ಕಾರಿ LnLಗೆ ಭೇಟಿ ನೀಡಿ.

1ನೇ ಪುಟದಿಂದ....

ವಿಜಯ್ ಅವರಿಗೆ ಸರ್ಕಾರ ರಚಿಸಲು ಬಿಡುತ್ತಿಲ್ಲ ಎಂಬ ಆರೋಪಗಳಿವೆ. ಕೇಂದ್ರ ಸರ್ಕಾರ ರಾಜ್ಯಪಾಲರನ್ನು ದುರ್ಬಳಕೆ ಮಾಡಿಕೊಂಡು ಬಿಜೆಪಿಯೇತರ ಸರ್ಕಾರ ರಚನೆಗೆ ಅಡ್ಡಿ ಪಡಿಸುವುದು ಮತ್ತು ಚಾಲ್ತಿಯಲ್ಲಿರುವ ಸರ್ಕಾರಗಳಿಗೆ ತೊಂದರೆ ಮಾಡುವ ಪ್ರವೃತ್ತಿಯನ್ನು ಮುಂದುವರೆಸಿದ್ದಾರೆ ಎಂದು ಪ್ರತಿಭಟನೆಯಲ್ಲಿ ಕಾಂಗ್ರೆಸ್ ಟೀಕಿಸಿದೆ. ಸಂಖ್ಯೆಗಳ ಮೇಲಾಟ: ಈ ನಡುವೆ ಸಂಖ್ಯಾಬಲಗಳ ಲೆಕ್ಕಾಚಾರ ಜೋರಾಗಿದೆ. ಟಿವಿಕೆ ಸ್ವತಂತ್ರವಾಗಿದ್ದು, 108 ಸ್ಥಾನಗಳನ್ನು ಹೊಂದಿದೆ. ಸರ್ಕಾರ ರಚನೆಗೆ ಅಗತ್ಯವಿರುವ 118 ಸ್ಥಾನಗಳನ್ನು ಗಳಿಸಲು ಇತರ ಪಕ್ಷಗಳ ಮೊರೆ ಹೋಗಿದೆ. ಡಿಎಂಕೆ ಜೊತೆ ಗುರುತಿಸಿಕೊಂಡಿದ್ದ 5 ಶಾಸಕರನ್ನು ಹೊಂದಿರುವ ಕಾಂಗ್ರೆಸ್ ಈಗಾಗಲೇ ಟಿಎಂಕೆಗೆ ಬೆಂಬಲ ಘೋಷಿಸಿದೆ. ಸಿಪಿಐ 2, ಸಿಪಿಐಎಂ 2, ವಿಸಿಕೆ 2 ಶಾಸಕರನ್ನು ಹೊಂದಿವೆ. ಈ ಪಕ್ಷಗಳು ಇಂದು ಸಂಜೆ ಸಭೆ ಸೇರಿ ಟಿವಿಕೆಗೆ ಬೆಂಬಲ ನೀಡುವ ಬಗ್ಗೆ ನಿರ್ಣಯ ತೆಗೆದುಕೊಳ್ಳುವ ಸಾಧ್ಯತೆ ಇದೆ. ಇದು ನಡೆದಿದ್ದೇ ಆದರೆ, ಟಿವಿಕೆ ಸರ್ಕಾರ ರಚಿಸಲು ಅಗತ್ಯವಿರುವ ಸರಳ ಬಹುಮತವನ್ನು ಪಡೆಯಲಿದೆ. 119 ಶಾಸಕರ ಪಟ್ಟಿಯನ್ನು ಇಂದು ಸಂಜೆ ಅಥವಾ ನಾಳೆಯೊಳಗೆ ವಿಜಯ್ ರಾಜ್ಯಪಾಲರಿಗೆ ಸಲ್ಲಿಸುವ ಸಾಧ್ಯತೆ ಇದೆ. ಈ ನಡುವೆ ಜಾತ್ಯತೀತ ನಿಲುವಿನ ಸಿದ್ಧಾಂತ ಹೊಂದಿರುವ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಎರಡು ಶಾಸಕರನ್ನು ಹೊಂದಿದ್ದು ಬಹುತೇಕ ಟಿವಿಕೆಗೆ ಬೆಂಬಲ ನೀಡುವ ನಿರೀಕ್ಷೆಗಳಿವೆ. ಕ್ಯಾಪ್ಟನ್ ವಿಜಯ್‌ಕಾಂತ್ ಅವರು ಸ್ಥಾಪಿಸಿರುವ ಡಿಎಂಡಿಕೆ ಕಳೆದ ಚುನಾವಣೆಗೂ ಮುನ್ನ ಡಿಎಂಕೆ ಜೊತೆ ಸೇರಿಕೊಂಡಿತ್ತು. ಅತಂತ್ರ ಪರಿಸ್ಥಿತಿಯಲ್ಲಿ ಟಿವಿಕೆಯೊಂದಿಗೆ ಕೈಜೋಡಿಸಲು ಮುಂದಾಗಿದೆ ಎನ್ನಲಾಗುತ್ತಿದೆ. ಈ ಎಲ್ಲಾ ಪಕ್ಷಗಳು ಒಟ್ಟಾದರೆ ಮೈತ್ರಿ ಕೂಟ 122 ಶಾಸಕರನ್ನು ಒಳಗೊಳ್ಳಲಿದೆ ಎಂದು ಹೇಳಲಾಗುತ್ತಿದೆ. ಇತ್ತ 59 ಶಾಸಕರನ್ನು ಹೊಂದಿರುವ ಡಿಎಂಕೆ ರಚನಾತ್ಮಕ ವಿರೋಧ ಪಕ್ಷವಾಗಿ ಕೆಲಸ ಮಾಡುವುದಾಗಿ ಘೋಷಿಸಿದೆ. ಒಂದು ವೇಳೆ ಪವಾಡ ಪರಿಸ್ಥಿತಿಯಲ್ಲಿ ಡಿಎಂಕೆ–ಎಐಎಡಿಎಂಕೆ ಪಕ್ಷಗಳು ಒಂದಾದರೂ ಒಟ್ಟು 106 ಶಾಸಕರ ಸಂಖ್ಯಾ ಬಲವಾಗಲಿದೆ. ಎಐಎಡಿಎಂಕೆ (47) ಎನ್‌ಡಿಎ ಮಿತ್ರಕೂಟದಲ್ಲಿದ್ದು, ಬಿಜೆಪಿಯ 1, ಪಿಎಂಕೆಯ 4, ಎಎಂಎಂಕೆಯ ಪಕ್ಷದ 1 ಶಾಸಕರನ್ನು 53 ಸಂಖ್ಯಾ ಬಲ ಜೋಡಣೆಯಾಗಲಿವೆ. ಡಿಎಂಕೆ ಮತ್ತು ಎಐಎಡಿಎಂಕೆ ಮಿತ್ರ ಪಕ್ಷಗಳು ಒಟ್ಟು ಸೇರಿದರೂ 112 ಸಂಖ್ಯಾಬಲವಾಗಲಿದೆ. ಡಿಎಂಕೆ ಜೊತೆಯಲ್ಲಿದ್ದ ಡಿಎಂಡಿಕೆ (1), ಸಿಪಿಐ (2), ಸಿಪಿಐಎಂ (2), ಎಸಿಕೆ (2), ಐಯುಎಂಎಲ್ (2) ಸ್ಥಾನಗಳು ಸೇರಿದರೆ ಆಗ ಡಿಎಂಕೆ ಮತ್ತು ಎಐಎಡಿಎಂಕೆ ಎರಡು ಪಕ್ಷಗಳು ಹಾಗೂ ಅದರ ಮಿತ್ರ ಪಕ್ಷಗಳ ಒಟ್ಟು ಬಲಾಬಲ 121 ಆಗುವ ಲೆಕ್ಕಾಚಾರಗಳಿವೆ. ಆದರೆ ಕಮ್ಯುನಿಸ್ಟ್ ಪಕ್ಷಗಳು ಹಾಗೂ ಮುಸ್ಲಿಂ ಲೀಗ್ ಬಿಜೆಪಿ ಮಿತ್ರಕೂಟದೊಂದಿಗೆ ಕೈ ಜೋಡಿಸುವ ಸಾಧ್ಯತೆ ಬಗ್ಗೆ ಅನುಮಾನವಿದೆ. ಒಟ್ಟಾರೆ ಇಂದು ಸಂಜೆಯೊಳಗೆ ತಮಿಳುನಾಡಿನ ರಾಜಕೀಯ ಪ್ರಹಸನ ತಾರ್ಕಿಕ ಅಂತ್ಯ ಕಾಣುವ ಚರ್ಚೆಗಳಾಗುತ್ತಿವೆ.

# ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆ.

ನೈಜ್ಯ ದೆಸೆ ನ್ಯೂಸ್

**ಬಾಗೇಪಲ್ಲಿ: ಕನ್ನಡ ಉಳಿಗಾಗಿ ನಾವು ಒಂದಾಗಬೇಕಿದ್ದು, ಬೇರೆ ಬೇರೆ ಭಾಷೆಯಿಂದ ಕನ್ನಡ ಮರೆಯಾಗುತ್ತಿರುವುದು ನೋವಿನ ಸಂಗತಿ. ಆದಕ್ಕಾಗಿ ಪ್ರತಿಯೊಬ್ಬರೂ ಪ್ರತಿಜ್ಞೆ ಮಾಡಿ, ಕನ್ನಡ ಉಳಿವಿಗಾಗಿ ಹೋರಾಟ ಮಾಡಬೇಕು ಎಂದು ಬಾಗೇಪಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಚಿನ್ನ ಕೈವಾರಮಯ್ಯ ಹೇಳಿದರು.**

ಪಟ್ಟಣದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಕಛೇರಿಯಲ್ಲಿ ನಡೆದ 112ನೇ ಕಸಾಪ ಸಂಸ್ಥಾಪನಾ ದಿನಾಚರಣೆಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು ಕರ್ನಾಟಕದ ಗಡಿ ತಾಲ್ಲೂಕು ತೆಲುಗು ಭಾಷೆಯಲ್ಲಿ ಮಾತಾಡುತ್ತಿದ್ದ ತಾಲ್ಲೂಕಿನಲ್ಲಿ ಕನ್ನಡ ಕಲಾ ಸಂಘ, ಕನ್ನಡ ಸಾಹಿತ್ಯ ಪರಿಷತ್‌ನ ಮೂಲಕ ಎಸ್.ವಿ.ಕೃಷ್ಣಮೂರ್ತಿ, ಉದಯ್‌ಕುಮಾರ್,




ನಾಗರಾಜ್, ನಯಾಜ್ ಅಹಮದ್, ಶ್ರೀರಾಮ ಚಂದ್ರ ಮೂರ್ತಿ, ಕರವೇ ಚಂದ್ರಶೇಖರ್ ಸೇರಿದಂತೆ ಅನೇಕ ಕಲಾವಿದರು, ನಾಟಕಕಾರರು, ಸಾಹಿತಿಗಳು, ಹೋರಾಟಗಾರರು ಕನ್ನಡ ಭಾಷೆ ಉಳಿಸಿ ಬೆಳೆಸಿದ್ದಾರೆ. ಕನ್ನಡದ ನಾಟಕ ಪ್ರದರ್ಶನ ಮಾಡಿ ಜನಜಾಗೃತಿ ಮೂಡಿಸಿದ್ದಾರೆ.

ಸರ್ಕಾರಿ, ಖಾಸಗಿ ಕಚೇರಿಗಳಲ್ಲಿ, ಬ್ಯಾಂಕ್‌ಗಳಲ್ಲಿ ಮತ್ತು ಮನೆಗಳಲ್ಲಿ ಸಾರ್ವಜನಿಕರು ಕನ್ನಡ ಭಾಷೆಯಲ್ಲಿ ವ್ಯವಹರಿಸುವಂತೆ ಮನವಿ ಮಾಡಿದರು. ಕನ್ನಡ ನಾಡು, ನುಡಿ, ಸಾಹಿತ್ಯ ಮತ್ತು ಸಂಸ್ಕೃತಿಯ ಸಂರಕ್ಷಣೆಗಾಗಿ ಜನ್ಮತಾಳಿದ ಏಕೈಕ ಪ್ರಾತಿನಿಧಿಕ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು. ಸುಮಾರು ಒಂದು ಶತಮಾನಕ್ಕೂ ಅಧಿಕ ಇತಿಹಾಸ ಇರುವ ಈ ಸಂಸ್ಥೆಯು ಕೇವಲ ಒಂದು ಕಟ್ಟಡವಲ್ಲ, ಅದು ಏಳು ಕೋಟಿಕನ್ನಡಿಗರ ಭಾವನಾತ್ಮಕಕೇಂದ್ರವಾಗಿದೆ. 1915ರ ಮೇ 5ರಂದು ಸ್ಥಾಪನೆಯಾದ ಈ ಪರಿಷತ್ತು ಅಂದು ಹಾಕಿದ ಅಡಿಪಾಯ ಇಂದು ಮಹಾವೃಕ್ಷವಾಗಿ ಬೆಳೆದು ನಿಂತಿದೆ ಎಂದರು.

ಎಚ್.ಆರ್.ಸುಬ್ರಮಣ್ಯಂ ಮಾತನಾಡಿ ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಈ ಸಂಸ್ಥೆಯ ಮುಖ್ಯಗುರಿಯಾಗಿದೆ. ಇದು ಪ್ರತಿ ವರ್ಷ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನವನ್ನು ನಾಡಿನ ವಿವಿಧೆಡೆ ಆಯೋಜಿಸುತ್ತದೆ. ಹೊಸ ಬರಹಗಾರರನ್ನು ಪ್ರೋತ್ಸಾಹಿಸುವುದು ಹಳೆಯ ಅಮೂಲ್ಯ ಕೃತಿಗಳನ್ನು ಮರುಮುದ್ರಣ ಮಾಡುವುದು ಮತ್ತು ಕನ್ನಡ ನಾಡು–ನುಡಿಗೆ ಸಂಬಂಧಿಸಿದ ಚಳುವಳಿಗಳಿಗೆ ಬೆಂಬಲ ನೀಡುವುದು ಪರಿಷತ್ತಿನ ಪ್ರಮುಖಕಾರ್ಯವಾಗಿದೆಎಂದರು. ಶಿಕ್ಷಕಿ ವಿ.ಸುಕನ್ಯಾ, ನಿವೃತ್ತ ಶಿಕ್ಷಕ ಪಿ.ಜಿ.ಶಿವಶಂಕರಾಚಾರಿ ಕನ್ನಡ ಗೀತೆಗಳನ್ನು ಮತ್ತು ಚನ್ನರಾಯಪ್ಪ ಕ್ರಾಂತಿಗೀತೆ ಹಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ವಲಿಭಾಷ, ಪರಿಷತ್‌ನ ಗೌರವ ಕಾರ್ಯದರ್ಶಿ ಬಾಣಾಲಪಲ್ಲಿ ಶ್ರೀನಿವಾಸ್, ಈಶ್ವರಪ್ಪ, ಚೌಡಪ್ಪ, ಶ್ರೀನಿವಾಸತಂತ್ರಿ, ರಾಜರಾಜೇಶ್ವರಿ, ಕರವೇ ಜಬೀವುಲ್ಲಾ, ಬಾಬಾಜಾನ್, ಸಾಯಿಜ್ಯೋತಿ ಇದ್ದರು.

# ಮಹಿಂದ್ರಾ ಥಾರ್ ರಿವರ್ಸ್ ವೇಳೆ ವಿದ್ಯಾರ್ಥಿನಿಯರಿಗೆ ಡಿಕ್ಕಿ

## ಸಿಂಧನೂರಿನಲ್ಲಿ ಹೃದಯವಿದ್ರಾವಕ ದುರಂತ ಓರ್ವ ವಿದ್ಯಾರ್ಥಿನಿ ಸಾವು, ಮೂವರಿಗೆ ಗಂಭೀರ ಗಾಯ



ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲೆಯ ಸಿಂಧನೂರು ಪಟ್ಟಣದಲ್ಲಿ ಇಂದು ಮಧ್ಯಾಹ್ನ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಕಾಲೇಜು ಮುಗಿಸಿಕೊಂಡು ಮನೆಗೆ ತೆರಳುತ್ತಿದ್ದ ವಿದ್ಯಾರ್ಥಿನಿಯರ ಮೇಲೆ ಕಾರು ಹರಿದ ಪರಿಣಾಮ ಓರ್ವ ವಿದ್ಯಾರ್ಥಿನಿ ಸ್ಥಳದಲ್ಲೇ ಸಾವನ್ನಪ್ಪಿದ ದಾರುಣ ಘಟನೆ ನಡೆದಿದೆ. ಚಾಲಕರ ಅಜಾಗರೂಕತೆ ಹಾಗೂ ಅತಿವೇಗ ಈ ದುರಂತಕ್ಕೆ ಕಾರಣವೆಂದು ಪ್ರಾಥಮಿಕವಾಗಿ ತಿಳಿದುಬಂದಿದೆ.**

ಘಟನೆ ಸಿಂಧನೂರು ಪಟ್ಟಣದ ಚೇತನ ಆಸ್ಪತ್ರೆ ಮುಂಭಾಗದಲ್ಲಿ ನಡೆದಿದೆ. ಎವಿಎಸ್ ಬ್ರಿಲಿಯಂಟ್ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿನಿಯರು ಕಾಲೇಜು ಮುಗಿಸಿ ನಡೆದುಕೊಂಡು ಹೋಗುತ್ತಿದ್ದರು. ರಸ್ತೆಯಲ್ಲಿ ನಿಲ್ಲಿಸಿದ್ದ ಮಹಿಂದ್ರಾ ಥಾರ್ ಕಾರನ್ನು ಚಾಲಕ ಏಕಾಏಕಿ ವೇಗವಾಗಿ ರಿವರ್ಸ್ ತೆಗೆದಿದ್ದಾನೆ. ನಿಯಂತ್ರಣ ತಪ್ಪಿದ ಕಾರು ನೇರವಾಗಿ ವಿದ್ಯಾರ್ಥಿನಿಯರಿಗೆ ಡಿಕ್ಕಿ ಹೊಡೆದಿದೆ. ಅಪಘಾತದ ಬಳಿಕ ಸ್ಥಳದಲ್ಲಿ ಆತಂಕದ ವಾತಾವರಣ ನಿರ್ಮಾಣವಾಯಿತು. ಓರ್ವ ಬಲಿ ಮೂವರಿಗೆ ಗಂಭೀರ ಗಾಯ ಈ ದುರ್ಘಟನೆಯಲ್ಲಿ ಜವಳಗೇರಾ ಗ್ರಾಮದ ನಿವಾಸಿ ಭೂಮಿಕಾ (17) ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ಮೃತಪಟ್ಟಿದ್ದಾಳೆ. ಗಾಯಗೊಂಡ ವಿದ್ಯಾರ್ಥಿನಿಯರು:

ಮೇಘನಾ (17)
ಮಹೇಶ್ವರಿ (17)
ಜಹೀದಾ (17)

ಇವರಿಗೆ ಗಂಭೀರ ಗಾಯಗಳಾಗಿದ್ದು, ಹತ್ತಿರದ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಮತ್ತೊಬ್ಬ ವಿದ್ಯಾರ್ಥಿನಿ ಸಣ್ಣ ಗಾಯಗಳೊಂದಿಗೆ ಅಪಾಯದಿಂದ ಪಾರಾಗಿದ್ದಾಳೆ.

ಪ್ರತ್ಯಕ್ಷದರ್ಶಿಗಳ ಮಾತು "ಕಾರು ಏಕಾಏಕಿ ವೇಗವಾಗಿ ಹಿಂದಕ್ಕೆ ಬಂದಿತು. ವಿದ್ಯಾರ್ಥಿನಿಯರು ತಪ್ಪಿಸಿಕೊಳ್ಳುವಷ್ಟರಲ್ಲಿ ಡಿಕ್ಕಿ ಹೊಡೆದಿತು. ದೃಶ್ಯ ನೋಡಲು ತುಂಬಾ ದುಃಖಕರವಾಗಿತ್ತು," ಎಂದು ಸ್ಥಳೀಯರು ತಿಳಿಸಿದ್ದಾರೆ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಚಾಲಕನ ವಿರುದ್ಧ ನಿರ್ಲಕ್ಷ್ಯ ಚಾಲನೆ ಪ್ರಕರಣ ದಾಖಲಿಸಲಾಗಿದೆ. ಅಪಘಾತದ ನಿಖರ ಕಾರಣಗಳ ಕುರಿತು ತನಿಖೆ ಮುಂದುವರಿದಿದೆ.

# ಸಾರಕ್ಕಿ ಕೆರೆ ಒತ್ತುವರಿ :58 ಕಟ್ಟಡಗಳಿಗೆ ಕಾದಿದೆ ಗ್ರಹಚಾರ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ನಗರದ ಸಾರಕ್ಕಿ ಕೆರೆಯಲ್ಲಿ ಭಾರೀ ಅತಿಕ್ರಮಣ ನಡೆದಿರುವುದು ಕಂದಾಯ ಇಲಾಖೆಯ ಇತ್ತೀಚಿನ ಸಮೀಕ್ಷಾ ವರದಿಯಲ್ಲಿ ಬಹಿರಂಗವಾಗಿದೆ. ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಸಾರಕ್ಕಿ ಕೆರೆಯ ವ್ಯಾಪ್ತಿಯಲ್ಲಿ ಒಟ್ಟು 58 ಅತಿಕ್ರಮಣ ಪ್ರಕರಣಗಳು ಪತ್ತೆಯಾಗಿದ್ದು, ಬಫರ್ ವಲಯದಲ್ಲಿಯೂ ಅನಧಿಕೃತ ಕಟ್ಟಡಗಳು ನಿರ್ಮಾಣವಾಗಿರುವುದು ಆತಂಕ ಮೂಡಿಸಿದೆ.**

ದಕ್ಷಿಣ ಪಾಲಿಕೆ ಹಾಗೂ ಭೂದಾಖಲೆ ಸಹಾಯಕ ನಿರ್ದೇಶಕರ ನೇತೃತ್ವದಲ್ಲಿ ನಡೆದ ಸಮೀಕ್ಷೆಯಲ್ಲಿ ಮನೆಗಳು, ವಾಣಿಜ್ಯ ಕಟ್ಟಡಗಳು ಹಾಗೂ ಒಂದು ದೇವಾಲಯ ಸೇರಿ ಹಲವಾರು ಅತಿಕ್ರಮಣಗಳು ಗುರುತಿಸಲ್ಪಟ್ಟಿವೆ. ಅತಿಕ್ರಮಿತ ಆಸ್ತಿಗಳ ಮೇಲೆ ಸಂಖ್ಯೆಗಳು ಗುರುತು ಹಾಕಿ ಕೆರೆಯ ಗಡಿಯನ್ನು ಗುರುತಿಸಲಾಗಿದೆ. ಕೆರೆ ಸಮೀಪದ ಬಲಮುರಿ ಪ್ರಸನ್ನ ಮಹಾಗಣಪತಿ ದೇವಸ್ಥಾನದ ಒಂದು ಭಾಗವೂ ಅತಿಕ್ರಮಣದ ಒಳಪಡುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.ಈ ವರದಿಯನ್ನು ಹೈಕೋರ್ಟ್‌ಗೆ ಸಲ್ಲಿಸಲು ಸಿದ್ಧತೆ



ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ತೆರವು ಕಾರ್ಯಾಚರಣೆ ನಡೆಸುವ ಸಾಧ್ಯತೆಗಳಿವೆ. ಜಿಬಿಎ ಕೆರೆ ಅಭಿವೃದ್ಧಿ ಇಲಾಖೆ ಅಧಿಕಾರಿಗಳೊಂದಿಗೆ ಈಗಾಗಲೇ ಸಭೆ ನಡೆಸಲಾಗಿದ್ದು, ಕಂದಾಯ ಇಲಾಖೆಯಿಂದ ಅಂತಿಮ ವರದಿ ಬಂದ ನಂತರ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ರಾಜಕೀಯ ಕೈವಾಡದ ಆರೋಪ:ಕೆಲವು ಅತಿಕ್ರಮಣಗಳ ಹಿಂದೆ ಸ್ಥಳೀಯ ರಾಜಕೀಯ ಮುಖಂಡರ ಬೆಂಬಲವಿದೆ ಎಂಬ ಆರೋಪಗಳು ಕೇಳಿಬಂದಿವೆ. ಇದರಿಂದ ತೆರವು ಕಾರ್ಯಾಚರಣೆ ಹೇಗೆ ನಡೆಯಲಿದೆ ಎಂಬ ಪ್ರಶ್ನೆ ಎದುರಾಗಿದೆ. ಹೈಕೋರ್ಟ್ ಸೂಚನೆ; ಕಳೆದ ಫೆಬ್ರವರಿಯಲ್ಲಿ ಹೈಕೋರ್ಟ್ ವಿಭಾಗೀಯ ಪೀಠವು ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಕೆರೆಯ ಅತಿಕ್ರಮಣ ತೆರವುಗೊಳಿಸಲು ಸಮಿತಿ ರಚಿಸುವಂತೆ ಸೂಚಿಸಿತ್ತು. ಅದರಂತೆ ಸಮಿತಿ ರಚನೆಯಾಗಿ ಅತಿಕ್ರಮಣ ಗುರುತಿಸುವ ಕಾರ್ಯ ನಡೆಯುತ್ತಿದೆ. ಮೂರು ತಿಂಗಳೊಳಗೆ ವರದಿ ಸಲ್ಲಿಸಲು ಗಡುವು ನೀಡಲಾಗಿದೆ.

ಕೆರೆಯ ಸ್ವರೂಪ ಬದಲಾವಣೆ; ಪುಟ್ಟೇನಹಳ್ಳಿ ಪ್ರದೇಶದ ಜೆಪಿ ನಗರ 6 ಮತ್ತು 7ನೇ ಹಂತಗಳ ನಡುವೆ ಇರುವ ಸಾರಕ್ಕಿ ಕೆರೆ ಸುಮಾರು 82.19 ಎಕರೆ ವ್ಯಾಪ್ತಿಯಾಗಿದೆ. ಸಾರ್ವಜನಿಕ ರಸ್ತೆ ನಿರ್ಮಾಣದ ನಂತರ ಕೆರೆಯ ಸ್ವರೂಪದಲ್ಲಿ ದೊಡ್ಡ ಮಟ್ಟದ ಬದಲಾವಣೆ ಕಂಡುಬಂದಿದೆ. ದಿನೇ ದಿನೇ ಕೆರೆಯ ವ್ಯಾಪ್ತಿ ಕುಗ್ಗುತ್ತಿರುವುದಾಗಿ ಸ್ಥಳೀಯರು ಆರೋಪಿಸುತ್ತಿದ್ದಾರೆ. ನಿವಾಸಿಗಳ ಆತಂಕಅತಿಕ್ರಮಣ ಗುರುತು ಹಾಕಿರುವುದರಿಂದ ಸ್ಥಳೀಯ ನಿವಾಸಿಗಳಲ್ಲಿ ಭೀತಿ ಹೆಚ್ಚಾಗಿದೆ. ಹಲವಾರು ಮನೆಗಳು ದಶಕಗಳ ಹಿಂದೆ ನಿರ್ಮಾಣವಾಗಿದ್ದು, ಪಾಲಿಕೆ ತೆರಿಗೆ ಸಂಗ್ರಹಿಸುತ್ತಿರುವುದನ್ನು ನಿವಾಸಿಗಳು ಪ್ರಶ್ನಿಸುತ್ತಿದ್ದಾರೆ. ಯಾವುದೇ ಲಿಖಿತ ನೋಟಿಸ್ ನೀಡದೆ ಮನೆಗಳನ್ನು ಗುರುತು ಮಾಡಿದ್ದಾರೆ. ನಾವು ತುಂಬಾ ಆತಂಕದಲ್ಲಿದ್ದೇವೆ ಎಂದು ಅಲ್ಲಿನ ನಿವಾಸಿಯೊಬ್ಬರು ಅಳಲು ತೋಡಿಕೊಂಡಿದ್ದಾರೆ. ನಗರದ ಇತರೆ ಕೆರೆಗಳಲ್ಲಿಯೂ ಬಫರ್ ವಲಯ ಉಲ್ಲಂಘನೆಗಳಿದ್ದರೂ, ಏಕೆ ಸಾರಕ್ಕಿ ಕೆರೆಯೊಂದರ ಮೇಲೆ ಮಾತ್ರ ಕ್ರಮ ಕೇಂದ್ರೀಕರಿಸಲಾಗಿದೆ ಎಂಬ ಪ್ರಶ್ನೆ ಸ್ಥಳೀಯರಿಂದ ಕೇಳಿಬರುತ್ತಿದೆ.

# ಯಾವ ಪುರುಷಾರ್ಥಕ್ಕೆ ಬಿಎಸ್‌ವೈ ಅಭಿಮಾನೋತ್ಸ ಹೈಕ ಮಾಂಡ್ ಮುಂದೆ ಬ್ಲಾಕ್ ಮೇಲ್ ತಂತ್ರ ಅಷ್ಟೆ': ಬಸನಗೌಡ ಪಾಟೀಲ್ ಯತ್ನಾಳ್

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಕರ್ನಾಟಕದಲ್ಲಿ ಜನರ ಭಾವನೆಗಳನ್ನು ಗುರುತಿಸಲಾಗದಷ್ಟು ಬಿಜೆಪಿ ಹೈಕಮಾಂಡ್ ದುರ್ಬಲವಾಗಿದೆ ಎಂದು ನನಗನ್ನಿಸುತ್ತದೆ ಎಂದು ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಬಿ ವೈ ವಿಜಯೇಂದ್ರ ಅವರನ್ನು ತೆಗೆದುಹಾಕಿ ಹಿಂದುತ್ವ, ಅಭಿವೃದ್ಧಿಪರ ಕೆಲಸ ಮಾಡುವ ಬೇರೆ ನಾಯಕರಿಗೆ ನಾಯಕತ್ವ ನೀಡಿದರೆ ಕರ್ನಾಟಕದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುತ್ತದೆ, ಇದೇ ಯಡಿಯೂರಪ್ಪ, ವಿಜಯೇಂದ್ರ ಅವರೇ ಮುಂದುವರಿದರೆ ಬಿಜೆಪಿ ಕರ್ನಾಟಕದಲ್ಲಿ ಮತ್ತೆ ಮಣ್ಣುಮುಕ್ಕುತ್ತದೆ ಎಂದರು.**

ಯಡಿಯೂರಪ್ಪನವರ ಕುಟುಂಬದಲ್ಲಿ ಮತ್ತೆ ಮೂವರು ರಾಜಕೀಯಕ್ಕೆ ಬರಲು ತಯಾರಾಗಿದ್ದಾರೆ, ಬಿ ವೈ ರಾಘವೇಂದ್ರ ಪುತ್ರ ಯುವ ಮೋರ್ಚಾ ಅಧ್ಯಕ್ಷರಾಗಿದ್ದಾರೆ. ವೀರಶೈವ



ಮಹಿಳಾ ಘಟಕದ ಅಧ್ಯಕ್ಷೆ ಉಮಾ ಆಗಿದ್ದಾರೆ. ಇವರ ಕೊಡುಗೆ ರಾಜ್ಯಕ್ಕೆ ಏನಿದೆ ಎಂದು ಕೇಳಿದರು. ಚಿತ್ರದುರ್ಗದಲ್ಲಿ ಬಿಜೆಪಿ ಅಭಿಮಾನೋತ್ಸವದ ಅವಶ್ಯಕತೆ ಏನಿತ್ತು, ಪಕ್ಷದ ಹಿರಿಯ ನಾಯಕರಾದ ಎ ಹೆಚ್ ವಿಶ್ವನಾಥ್ ಅಂಥವರೇ ಹೇಳಿದ್ದಾರೆ,ಅವರು ಒಂದು ಸಮುದಾಯದ ಪ್ರಮುಖ ನಾಯಕರು ಇಂಥದ್ದನ್ನೆಲ್ಲಾ ಕೇಂದ್ರ ನಾಯಕರು ತಿಳಿದುಕೊಳ್ಳಬೇಕು, ಮೋದಿಯವರು ವಂಶ ರಾಜಕಾರಣ ಬೇಡ, ಕುಟುಂಬ ರಾಜಕಾರಣ ನಮ್ಮಲ್ಲಿ ಇಲ್ಲ, ಭ್ರಷ್ಟಾಚಾರ ಇಲ್ಲ ಎನ್ನುತ್ತಾರೆ, ಹಾಗಾದರೆ ಕರ್ನಾಟಕ ಬಿಜೆಪಿಯೊಳಗೆ ನಡೆಯುತ್ತಿರುವುದೇನು ಎಂದರು.

ಕರ್ನಾಟಕದಲ್ಲಿ ಭ್ರಷ್ಟ ಕುಟುಂಬವನ್ನು ಮುಕ್ತ ಮಾಡಿದರೆ ಬಿಜೆಪಿ 350 ಸೀಟು ಬರುತ್ತದೆ, ಯಡಿಯೂರಪ್ಪ ಆಪರೇಷನ್ ಕಮಲ ಮಾಡಿದರು, 30–50 ಕೋಟಿ ಕೊಟ್ಟರು, ಉಪ ಚುನಾವಣೆ ಆಯಿತು, ಬಾಗಲಕೋಟೆ, ಎಲೆಕ್ಷನ್ ಜನರ ತೀರ್ಪು ಅಲ್ಲ, ಬಾಗಲಕೋಟೆಯಲ್ಲಿ ಜಾತಿ ಆಧಾರ ಮೇಲೆ ಲಿಂಗಾಯಿತರಿಗೆ, ಬ್ರಾಹ್ಮಣರಿಗೆ 10 ಸಾವಿರ ಕೊಟ್ಟರು. ಹಿಂದುಳಿದ ವರ್ಗದವರಿಗೆ 5 ಸಾವಿರ ಕೊಟ್ಟರು, ಒಂದು ಬೂತ್ ಗೆ 25 ಲಕ್ಷ ಹಂಚಿದ್ದಾರೆ ಎಂದು ಆರೋಪಿಸಿದರು. ಅಪ್ಪ–ಮಗನಿಗೆ ಮಲ್ಲಿಕಾರ್ಜುನ ಖರ್ಗೆ–ಪ್ರಿಯಾಂಕ್ ಖರ್ಗೆ ಅಪ್ಪ–ಮಗನ ವಿರುದ್ಧ ಮಾತನಾಡುವ ಧೈರ್ಯವಿಲ್ಲ, ಉಪ ಚುನಾವಣೆಯಲ್ಲಿ ಸೋತರೂ ಸ್ವಲ್ಪವೂ ದುಃಖಪಡದೆ ಬಿಜೆಪಿ ಆಫೀಸಲ್ಲಿ ಪಶ್ಚಿಮ ಬಂಗಾಳ ಎಲೆಕ್ಷನ್ ಗೆದ್ದ ಸಂಭ್ರಮಾಚರಣೆ ಮಾಡಿದರು.

ಬೇರೆ ರಾಜ್ಯಗಳಲ್ಲಿ ಹಲವು ಬಿಜೆಪಿ ಮುಖ್ಯಮಂತ್ರಿಗಳಿದ್ದಾರೆ, ಯಾರಾದರೂ ಈ ರೀತಿ ಸಂಭ್ರಮಾಚರಣೆ ಮಾಡುತ್ತಾರೆ ಹೇಳಿ, ರಾಜ್ಯಾಧ್ಯಕ್ಷ ಬದಲಾವಣೆ ಆಗುತ್ತದೆ ಎಂದು ಅವರಿಗೆ ಖಚಿತವಾಗಿದೆ, ಹೀಗಾಗಿ ಯಡಿಯೂರಪ್ಪ ಸಂಭ್ರಮಾಚರಣೆ ಮಾಡುತ್ತಾರೆ, ನಮ್ಮ ಹಿಂದೆ ಲಿಂಗಾಯತರಿದ್ದಾರೆ ಎಂದು ತೋರಿಸಿಕೊಳ್ಳಲು ಹೈಕಮಾಂಡ್ ಮುಂದೆ ಬ್ಲಾಕ್ ಮೇಲ್ ಮಾಡಲು ಈ ಅಭಿಮಾನೋತ್ಸವ ಮಾಡುತ್ತಿದ್ದಾರೆ ವಿಜಯೇಂದ್ರಗೆ ಧಮ್ ಇಲ್ಲ, ವಿಧಾನಸೌಧದೊಳಗೆ ರೈತರ ಬಗ್ಗೆ, ರಾಜ್ಯದ ಜನತೆ ಬಗ್ಗೆ ಮಾತನಾಡಿದ್ದಾರೆಯೇ ಎಂದು ಟೀಕಿಸಿದರು. ಕರ್ನಾಟಕದಲ್ಲಿ ಡಿ ಕೆ ಶಿವಕುಮಾರ್ ಸಿಎಂ ಆದರೆ 10 ಸಲ ಮಾರಾಟ ಮಾಡುತ್ತಾರೆ, ಡಿ ಕೆ ಶಿವಕುಮಾರ್ ದೊಡ್ಡ ರಾಕ್ಷಸ ಇದ್ದಂತೆ ಎಂದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.